ಸಂಪುಟ : 10 ಸಂಚಿಕೆ: 158 ಪುಟ : 4+2 ಬೆಲೆ: 3.00 ರವಿವಾರ ಜುಲೈ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 158 Pages : 4+2 Price : 3.00 Sunday July 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲಾ ಮಾಜಿ ಸೈನಿಕರ, ಪ್ಯಾರಾಮಿಲಿಟರಿ ಸಂಘದಿಂದ ಕಾರ್ಗಿಲ್ ವಿಜಯೋತ್ಸವ । ವೀರ ಯೋಧರಿಗೆ ಗೌರವ ನಮನ

# ಯೋಧರ ಸೇವೆ ಸದಾ ಸ್ಮರಣೀಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಯೋಧರು ವೀರರು. ದೇಶವನ್ನು ಸಂರಕ್ಷಿಸುವ, ಕಟ್ಟುವ ಕಾರ್ಯದಲ್ಲಿ ತೊಡಗಿದವರು. ಮಳೆ, ಗಾಳಿ, ಬಿಸಿಲು, ಛಳಿ ಯಾವುದನ್ನೂ ಲೆಕ್ಕಿಸದೇ ದೇಶವನ್ನು ಕಾಯುವ ಕಾಯಕದಲ್ಲಿ ನಿರತರಾಗಿರುವ ಇವರ ಸೇವೆ ಸದಾ ಸ್ಮರಣೀಯ ಎಂದು ಜಿಲ್ಲಾ ಮಾಜಿ ಸೈನಿಕರ ಸಂಘದ ಸಂಚಾಲಕ, ನ್ಯಾಯವಾದಿ ಸುಧೀರಸಿಂಹ ಘೋರ್ಪಡೆ ಹೇಳಿದರು.

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಜಿಲ್ಲಾ ಮಾಜಿ ಸೈನಿಕರ ಸಂಘ, ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ, ವೀರನಾರಿಯರ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ 26ನೇ ಕಾರ್ಗಿಲ್ ವಿಜಯೋತ್ಸವದಲ್ಲಿ ಮಾತನಾಡುತ್ತಿದ್ದರು.

ಭಾರತೀಯ ಸೈನಿಕರು ವೀರರೂ, ಶೂರರೂ ಆಗಿದ್ದು, ಅವರೆಲ್ಲರಿಗೂ ನಾವು ಬೆಂಬಲದೊಂದಿಗೆ ಧೈರ್ಯ ತುಂಬುವ ಕಾರ್ಯ ಮಾಡಬೇಕಿದೆ ಎಂದು ಹೇಳಿದರಲ್ಲದೆ, ಕಾರ್ಗಿಲ್ ಯುದ್ಧದಲ್ಲಿ ವೀರಮರಣ ಹೊಂದಿದ ಯೋಧರಿಗೆ ನಮನ ಸಲ್ಲಿಸಿದರು. ಕಾರ್ಗಿಲ್ ಯುದ್ಧದ ಘಟನಾವಳಿಗಳನ್ನು ಎಸ್. ಎಸ್. ಪೆಂಟಾ ವಿವರಿಸಿದರು.

> ಹಾಲಿ ಮತ್ತು ಮಾಜಿ ಪ್ಯಾರಾ ಮಿಲಿಟರಿ ಯೋಧರ ಸಂಘದ ಅಧ್ಯಕ್ಷ ನಾಗರಾಜ ಕುಂದರಗಿ ಮಾತನಾಡಿ, ಸೈನಿಕರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ದೇಶ ರಕ್ಷಣೆ, ಗಡಿ ಕಾಯುವ ಕಾಯಕದಲ್ಲಿ ತಮ್ಮನ್ನು ಸಮರ್ಪಿಸಿಕೊಂಡವರು. ಕಾರ್ಗಿಲ್ ವಿಜಯೋತ್ಸವ ಹಾಗೂ ದೇಶಕ್ಕಾಗಿ ತಮ್ಮ ಪ್ರಾಣ ನೀಡಿದ ಹುತಾತ್ಮ ಸೈನಿಕರಿಗೆ ಗೌರವ ನಮನ ಸಲ್ಲಿಸುವ ಕಾರ್ಯ ಸರ್ಕಾರ, ಜಿಲ್ಲಾಡಳಿತದಿಂದ ಆಗಬೇಕು. ಆದರೆ ಮಾಜಿ ಸೈನಿಕರ ಸಂಘಟನೆಗಳು ಕಾರ್ಯಕ್ರಮ ಆಯೋಜಿಸಿ ಅಧಿಕಾರಿಗಳನ್ನು ಆಮಂತ್ರಿಸುವದು ಎಷ್ಟು ಸಮಂಜಸ ಎಂದರು.

ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗೂಳಯ್ಯ ಮಾಲಗಿತ್ತಿಮಠ ಸಾಂದರ್ಭಿಕವಾಗಿ ಮಾತನಾಡಿದರು. ಹುತಾತ್ಮ ಯೋಧರ ಗೌರವಾರ್ಥವಾಗಿ ಮೌನ ಆಚರಿಸಲಾಯಿತು.

ಜಿಲ್ಲಾ ಮಾಜಿ ಸೈನಿಕರ ಸಂಘದ ಉಪಾಧ್ಯಕ್ಷ ಎಸ್.ಆರ್. ಪಾಟೀಲ, ಕಾರ್ಯದರ್ಶಿ ಸಿ.ಜಿ. ಸೊನ್ನದ, ಸಹ ಕಾರ್ಯದರ್ಶಿ ಮಹೇಶ ಆಶಿ, ಸಂಘಟನಾ ಕಾರ್ಯದರ್ಶಿ ಈರಣ್ಣ ತಳ್ಳಿಕೇರಿ, ನಿರ್ದೇಶಕರಾದ ವಿ.ಬಿ. ಬಿಂಗಿ, ಶರಣಪ್ಪ ಸರ್ವಿ, ಕೆ.ಎಸ್. ಹಿರೇಮಠ, ಜಿ.ಬಿ. ಅರವಟಗಿಮಠ, ಎ.ಎಂ. ತಹಸೀಲ್ದಾರ್, ಯಲ್ಲಪ್ಪಗೌಡ ಹುಲ್ಲೂರ, ಶಂಕರಗೌಡ ಪಾಟೀಲ, ಶರೀಫ ಹಿರೇಹಾಳ, ಮಮ್ಮದ್‌ಹನೀಫ್ ಶೇಕ್‌ಬಾಯಿ, ಬಸನಗೌಡ ಪಾಟೀಲ, ಶಂಕರ ಹಾದಿಮನಿ, ಎಸ್.ಎಸ್. ಪಾಟೀಲ, ಎಂ.ಎಸ್. ಗುಜ್ಜಲ, ಎನ್.ಎಚ್. ಕಂಬಳಿ, ವೀರಯ್ಯ ಮಾಲಗಿತ್ತಿಮಠ, ಶಂಕ್ರಪ್ಪ ಹೆಬ್ಬಳ್ಳಿ, ಸೈಯದ್ ಎಂ.ಹುಕ್, ಮೆಹಬೂಬ ತೆಕ್ಕೆದ, ನಾಗಯ್ಯ ಸಾವಳಗಿಮಠ, ವಾಸಪ್ಪ ಶೆಟವಾಜಿ, ವೀರನಾರಿಯರಾದ ಶಿವಲೀಲಾ ಬಾವಿಕಟ್ಟಿ, ಲಲಿತಾ ಕುರಹಟ್ಟಿ, ರೇಣುಕಾ ಮರಡಿ, ಮೀನಾಕ್ಷಿ ಬದಿ, ಶಾಂತದೇವಿ ಸಾವಳಗಿಮಠ, ಹಾಲಿ ಮತ್ತು ಮಾಜಿ ಪ್ಯಾರಾ ಮಿಲಿಟರಿ ಯೋದರ ಸಂಘದ ಗದಗ ಜಿಲ್ಲಾ ಗೌರವಾಧ್ಯಕ್ಷ ವಿ.ಎಸ್. ಅಕ್ಕಿ, ಅಧ್ಯಕ್ಷ ನಾಗರಾಜ ಕುಂದರಗಿ, ಸುರೇಶ್ ಮುಂಡವಾಡ, ಉಮೇಶ ಕರಿಗಣ್ಣವರ, ಮಲ್ಲಿಕಾರ್ಜುನ ಮೇವುಂಡಿ, ಬಸಯ್ಯ ಹಿರೇಮಠ, ಮಹಾಂತೇಶ್ ಲಕ್ಕುಂಡಿ, ಮಲ್ಲಯ್ಯ ಕರವೀರಮಠ, ಗೌಸ್‌ಮೋಹದಿನ ನದಾಫ್, ರವಿ ಕುಲಕರ್ಣಿ, ಮುತ್ತಣ್ಣ ಸಿಂಗಟಾಲಕೆರೆ, ಈಶ್ವರಪ್ಪ ಕರ್ಕಿಕಟ್ಟಿ, ಸುಭಾಷ ಹಾದಿಮನಿ, ಸೋಮನಗೌಡ ಪಾಟೀಲ, ಅಶೋಕ ನಾಯಕ, ಯಲ್ಲಪ್ಪ ಬೆನಕೊಪ್ಪ, ರಾಮಪ್ಪ ನೀರಲಗಿ, ಕರುಣಾಕರಣ, ಅಣ್ಣಪ್ಪ ಗಾಣಿಗೇರ ಸೇರಿದಂತೆ ಸೈನಿಕರು, ಬೆಟಗೇರಿ ಶರಣಬಸವೇಶ್ವರ ಪ್ರೌಢಶಾಲೆಯ ಶಿಕ್ಷಕಿಯರು, ವಿದ್ಯಾರ್ಥಿಗಳು, ಸಂಘ-ಸಂಸ್ಥೆಯ ಪದಾಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

### ಮಲ್ಲಿಕಾರ್ಜುನ ಶ್ರೀಗಳಿಂದ ಮಠದ ಹೆಸರಲ್ಲಿ ಆಸ್ತಿ ಸಂಪಾದನೆ; ರಾಜು ಖಾನಪ್ಪನವರ ಆರೋಪ

# ಕಪ್ಪತ್ತಗಿರಿ ಮಠದಲ್ಲಿ ಗೊಂದಲ ಸೃಷ್ಟಿ




> ಕಪ್ಪತಗಿರಿ ಮಠದಲ್ಲಿನ ಅವ್ಯವಸ್ಥೆ ಬಗ್ಗೆ ಪ್ರಶ್ನೆ ಮಾಡಿದರೆ ಅಲ್ಲಿರುವ ಕೆಲವರು ದಬ್ಬಾಳಿಕೆ ಮಾಡುತ್ತಾರೆ. ಈ ಭಾಗದ ಸುತ್ತಮುತ್ತಲಿನ ಗ್ರಾಮಸ್ಥರು ಮಾತ್ರ ಮಠಕ್ಕೆ ಸಂಬಧಪಡುತ್ತಾರೆ ಎನ್ನುತ್ತಾರೆ. ಹಾಗಾದರೆ ಗದಗ ಭಕ್ತರ ದೇಣಿಗೆಯನ್ನು ಸ್ವೀಕಾರ ಮಾಡುವುದೇಕೆ, ಕೇವಲ ಪಕ್ಕದ ಗ್ರಾಮದ ಭಕ್ತರ ದೇಣಿಗೆಯನ್ನಷ್ಟೇ ಸ್ವೀಕರಿಸಬಹುದಲ್ಲವೇ...
>
> **– ರಾಜು ಖಾನಪ್ಪನವರ.**
> ಶಿವರಾಮಕೃಷ್ಣ ಸೇವಾ ಟ್ರಸ್ಟ್ ಸಮಿತಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಹೆಸರಾಗಿರುವ ಕಪ್ಪತ್ತಗಿರಿಯಲ್ಲಿರುವ ಮಠದಲ್ಲಿ ಸಾಕಷ್ಟು ಗೊಂದಲಗಳಿವೆ. ಎಪ್ಪತ್ತು ಗಿರಿ ನೋಡುವುದಕ್ಕಿಂತ ಕಪ್ಪತ್ತಗಿರಿ ನೋಡಿದರೆ ಜೀವನ ಪಾವನವಾಗುತ್ತದೆ ಎಂದು ಹಿರಿಯರು ಹೇಳುತ್ತಾರೆ. ಆದರೆ, ಕಪ್ಪತ್ತಗುಡ್ಡದಲ್ಲಿರುವ ಕಪ್ಪತ್ತಗಿರಿಯ ಮಠದಲ್ಲಿ ಮಲ್ಲಿಕಾರ್ಜುನ ಶ್ರೀಗಳು ಹಲವು ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ ರಾಜು ಖಾನಪ್ಪನವರ ಆರೋಪಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಲಿಂ. ವಿಶ್ವನಾಥಸ್ವಾಮಿ ಕಪ್ಪತ್ತಮಠ ಇಬ್ಬರು ಮಕ್ಕಳು ಮಠ ನಡೆಸಬೇಕಾಗಿತ್ತು. ಹಣದ ಆಸೆಗಾಗಿ ಮೊದಲ ಮಗ ಮಲ್ಲಿಕಾರ್ಜುನ ಸ್ವಾಮಿ ಹಾಗೂ ಎರಡನೇ ಮಗ ಶ್ರೀಕಾಂತಸ್ವಾಮಿ ನಡುವೆ ತಿಕ್ಕಾಟ ನಡೆಯುತ್ತಿದೆ. ಮೂರು ವರ್ಷದಿಂದ ಇಬ್ಬರನ್ನು ಒಂದುಗೂಡಿಸಲು ಪ್ರಯತ್ನ ಮಾಡಲಾಗಿತ್ತು. ಆದರೆ ಅದು ಸಾಧ್ಯವಾಗಿಲ್ಲ. ಮಠದಲ್ಲಿ ಕೇಲವು ಪುಂಡರನ್ನು ಇಟ್ಟುಕೊಂಡು ಸ್ವತಃ ತಮ್ಮ ತಾಯಿಯ ಮೇಲೆ ಹಲ್ಲೆ ಮಾಡಿದ್ದಾರೆ. ಬಾಯಿಯಿಂದ ಕಚ್ಚಿ ಗಾಯಗೊಳಿಸಿದ್ದಾರೆ ಎಂದು ಆರೋಪಿಸಿದರು.

ಮಲ್ಲಿಕಾರ್ಜುನ ಶ್ರೀಗಳು ಮಠದ ಹೆಸರಿನಲ್ಲಿ ಸಾಕಷ್ಟು ಆಸ್ತಿ ಸಂಪಾದನೆ ಮಾಡಿದ್ದಾರೆ. ಭಕ್ತರಿಂದ ಬಂದ ಹಣದಿಂದ ವೈಭೋಗದ ಜೀವನ ನಡೆಸುತ್ತಿದ್ದಾರೆ. ಇಲ್ಲಿಯವರೆಗೂ ಕಪ್ಪತ್ತಗುಡ್ಡದಲ್ಲಿನ ಲೆಕ್ಕ ಪರಿಶೋಧನೆ ನಡೆದಿಲ್ಲ. ಹೀಗಾಗಿ ಹೊಸ ಟ್ರಸ್ಟ್ ನಿರ್ಮಾಣ ಮಾಡಲಾಗುವುದು. ಈ ಕೂಡಲೇ ಮುಂಡರಗಿ ಪೊಲೀಸರು ಕ್ರಮ ಕೈಗೊಂಡು ಸೂಕ್ತ ತನಿಖೆ ನಡೆಸಬೇಕು. ಸ್ವಾಮೀಜಿಗಳ ಈ ವರ್ತನೆಯಿಂದ ಮಠಕ್ಕೆ ಬರುವ ಭಕ್ತರು ಅಸಹಾಯಕರಾಗಿದ್ದಾರೆ. ಭಕ್ತರ ಹಿತದೃಷ್ಟಿಯಿಂದಲೂ ಮಠದಲ್ಲಿರುವ ಅವ್ಯವಸ್ಥೆ ದೂರವಾಗಬೇಕು ಎಂದು ಆಗ್ರಹಿಸಿದರು. 75ಕ್ಕೂ ಹೆಚ್ಚು ವಯಸ್ಸಾಗಿರುವ ವೃದ್ಧೆ ಲಲಿತಮ್ಮನವರ ಮೇಲೆ ಹಲ್ಲೆ ಮಾಡಿದ್ದು ಇದೇ ಮೊದಲಲ್ಲ. ಈ ಹಿಂದೆ ಸಾಕಷ್ಟು ಬಾರಿ ನನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಅವರೇ ಹೇಳಿಕೊಂಡಿದ್ದಾರೆ. ಈ ಬಗ್ಗೆ ಎಸ್‌ಪಿಯವರಿಗೆ ದೂರು ನೀಡಿದರೂ ಪ್ರಯೋಜನವಾಗಿಲ್ಲ ಎಂದು ರಾಜು ಖಾನಪ್ಪನವರ ತಿಳಿಸಿದರು. ಈ ವೇಳೆ ಮಹೇಶ್ ರೋಖಡೆ, ಕಿರಣ ಹಿರೇಮಠ, ವೆಂಕಟೇಶ ದೊಡ್ಡಮನಿ, ಕುಮಾರ ನಡಗೇರಿ, ರಾಚೋಟಿ ಕಾಡಪ್ಪನವರ, ವಿಶಾಲ ಗೋಕಾವಿ ಉಪಸ್ಥಿತರಿದ್ದರು.

### ಕಳ್ಳತನ ಮಾಡಲು ಬಂದು ಸಿಕ್ಕಿ ಬಿದ್ದ ಅಸಾಮಿ

# ಧರ್ಮದೇಟು ಬೀಳುತ್ತಿದ್ರು "ಪುಷ್ಪ" ಸಿನಿಮಾ ಡೈಲಾಗ್ ಹೇಳಿದ ಖದೀಮ!

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ವಿಸ್ ವೈರ್ ಕಳ್ಳತನ ಮಾಡ್ತಿದ್ದ ವೇಳೆ ಸಿಕ್ಕಿಬಿದ್ದ ಕಳ್ಳನಿಗೆ ಮಿಲ್ ಸಿಬ್ಬಂದಿ ಹಾಗೂ ಸಾರ್ವಜನಿಕರು ಧರ್ಮದೇಟು ನೀಡಿರುವ ಘಟನೆ ಗದಗ ನಗರದ ಹಳೆಯ ಡಿಸಿ ಸರ್ಕಲ್ ಬಳಿಯ ಹತ್ತಿ ಮಿಲ್ ಆಫೀಸ್ ಬಳಿ ನಡೆದಿದೆ.

ಹತ್ತಿ ಮಿಲ್ ಆಫೀಸ್ ನ ಸರ್ವಿಸ್ ವೈರ್ ಕದಿಯಲು ಬಂದ ಮೂವರಲ್ಲಿ ಒಬ್ಬ ಕಳ್ಳ ಸಿಕ್ಕಿ ಬಿದ್ದಿದ್ದಾನೆ. ಕಳ್ಳನನ್ನು ಹಿಡಿದ ಜನರು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಈ ವೇಳೆ ಅಷ್ಟೊಂದು ಗೂಸಾ ಬೀಳುತ್ತಿದ್ದರೂ ಸಹ ಈ ಕಳ್ಳ ತಗ್ಗೋದೆಯಿಲ್ಲ ಅಂತ ಪುಷ್ಪ ಸಿನಿಮಾದ ಡೈಲಾಗ್ ಹೇಳಿ ಆ್ಯಟಿಟ್ಯೂಡ್ ಪ್ರದರ್ಶಿಸಿದ್ದಾನೆ.

ಇದರಿಂದ ಮತ್ತಷ್ಟು ಕೋಪಗೊಂಡ ಜನರು ಹಿಗ್ಗಾಮುಗ್ಗಾ ಗೂಸಾ ನೀಡಿ ಪೊಲೀಸರಿಗೆ ಒಪ್ಪಿಸಿದ್ದಾರೆ. ನಗರದಲ್ಲಿ ಮೂರು ಜನ ಕಳ್ಳರಿಂದ ಹಲವು ಕಡೆಯ ಕಚೇರಿಗೆ ಹಾಕಿದ್ದ ವಿದ್ಯುತ್ ಸಂಪರ್ಕದ ವೈರ್ ಕಳ್ಳತನ ಮಾಡುತಿದ್ದರು. ವೈರ್ ಸುಟ್ಟು ಉಳಿದ ತಂತಿಯನ್ನ ಕೇಜಿಗಟ್ಟಲೆ ಮಾರಿ ಹಣ ಮಾಡುತಿದ್ದರು. ಜತೆ-ಗೆ ಬ್ಯಾಟರಿ ಹಾಗು ಜೆಸಿಬಿಗಳ ಬಿಡಿಭಾಗಗಳನ್ನ ಸಹ ಕಳ್ಳತನ ಮಾಡುತಿದ್ದರು. ಅದಲ್ಲದೆ ಗದಗ ನಗರದ ಹಲವು ಕಡೆ ಪೆಟ್ರೋಲ್ ಬಂಕ್, ಪಾನ್ ಶಾಪ್ ಸೇರಿದಂತೆ ಮನೆಗಳ್ಳತನ ಸಹ ನಡೆದಿದ್ದವು. ಹೀಗಾಗಿ ಕಳ್ಳರ ಹಾವಳಿಯಿಂದ ಆಕ್ರೋಶಗೊಂಡಿದ್ದ ಸ್ಥಳೀಯರು ಕಳ್ಳರನ್ನ ಪತ್ತೆ ಹಚ್ಚಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಈತ ರೋಣ ತಾಲೂಕಿನ ಹಳ್ಳಿಯೊಂದರ ಹೆಸರು ಹೇಳುತ್ತಿದ್ದು, ತನ್ನ ಹೆಸರನ್ನು ಮಹಾಂತೇಶ್ ಎಂದು ಹೇಳುತ್ತಿದ್ದಾನೆ. ಮಂಗಳೂರು ಜಿಲ್ಲೆಯಲ್ಲಿ ದುಡಿಯಲು ಹೋಗಿದ್ದು, ಅಲ್ಲಿ ಮಳೆಯಾಗುತ್ತಿರುವದರಿಂದ ವಾಪಾಸು ಊರಿಗೆ ಬಂದಿರುವದಾಗಿ ಹೇಳಿಕೊಂಡಿದ್ದಾನೆ. ಪರಾರಿಯಾಗಿರುವ ಇನ್ನಿಬ್ಬರು ಯಾರು ಎಂಬುದು ಪೊಲೀಸರ ತನಿಖೆಯಿಂದ ತಿಳಿದು ಬರಬೇಕಿದೆ.



### ಜಿಲ್ಲಾ ಕುರುಬ ಸಮಾಜದ ಯುವ ಬಳಗದ ವತಿಯಿಂದ ಕೃಷ್ಣಗೌಡ ಪಾಟೀಲರಿಗೆ ಸನ್ಮಾನ

# ಯುವಕರು ಸಮಾಜ ಸಂಘಟನೆಯಲ್ಲಿ ತೊಡಗಿಸಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಸಂಘಟನೆಯಲ್ಲಿ ಯುವ ಸಮುದಾಯದ ಪಾತ್ರ ಬಹಳ ಮುಖ್ಯವಾಗಿರುವದರಿಂದ ಯುವಕರು ಸಂಘಟನೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳುವ ಮೂಲಕ ಸದೃಢ ಸಮಾಜ ನಿರ್ಮಾಣ ಮಾಡಲು ಕೈಜೋಡಿಸಬೇಕು ಎಂದು ಯುವ ಕಾಂಗ್ರೆಸ್‌ನ ಜಿಲ್ಲಾಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ರಾಯಲ್ ವಿಲ್ಲಾದಲ್ಲಿ ಜಿಲ್ಲಾ ಕುರುಬ ಸಮಾಜದ ಯುವ ಬಳಗದ ವತಿಯಿಂದ ಹಮ್ಮಿಕೊಂಡ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

> ಯುವಕರ ಶಕ್ತಿ, ಗುರು-ಹಿರಿಯರ ಮಾರ್ಗದರ್ಶನ ಸಮ್ಮಿಲನಗೊಂಡರೆ ಅಸಾಧ್ಯವಾದ ಕೆಲಸ ಯಾವುದೂ ಇಲ್ಲ. ನಮ್ಮ ಕುಟುಂಬದ ಮೇಲೆ ಹಾಲುಮತ ಸಮಾಜದ ಕೊಡುಗೆ ಸಾಕಷ್ಟು ಇರುವದರಿಂದ ನಾನೂ ಕೂಡ ಹಾಲುಮತ ಸಮಾಜದ ಅಭಿವೃದ್ಧಿಗಾಗಿ ಸಹಾಯ, ಸಹಕಾರ ನೀಡಲು ಸದಾ ಸಿದ್ಧ.
>
> **– ಕೃಷ್ಣಗೌಡ ಪಾಟೀಲ.**
> ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷರು.

ಇದೇ ಸಂದರ್ಭದಲ್ಲಿ ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ, ಭಾರತ ಸರಕಾರದ ಆಹಾರ ನಿಗಮದ ರಾಜ್ಯ ನಿರ್ದೇಶಕ ರವಿ ದಂಡಿನ, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ವಕೀಲರ ಸಂಘದ ಜಿಲ್ಲಾಧ್ಯಕ್ಷ ರಾಜಶೇಖರ ಕಲ್ಲೂರ, ನೌಕರರ ಸಂಘದ ಜಿಲ್ಲಾ ▶▶3ನೇ ಪುಟಕ್ಕೆ

### ಶಹರ ಬಿಜೆಪಿ ವತಿಯಿಂದ ನಿವೃತ್ತ ಯೋಧರಿಗೆ ಸನ್ಮಾನ

# ಕಾರ್ಗಿಲ್‌ನಂತಹ ಪ್ರದೇಶದಲ್ಲಿ ಯುದ್ಧ ಸುಲಭವಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಗದಗ ಶಹರ ಬಿಜೆಪಿ ವತಿಯಿಂದ ಕಾರ್ಗಿಲ್ ಯುದ್ಧದಲ್ಲಿ ಪಾಲ್ಗೊಂಡ, ನಿವೃತ್ತ ಯೋಧರಾದ ಈರಪ್ಪ ಬಸಪ್ಪ ಪಡೇಸೂರ ಹಾಗು ಚನ್ನವೀರಪ್ಪ ಸೊನ್ನದರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ನಮ್ಮ ವೀರ ಯೋಧರು ತಮ್ಮ ತ್ಯಾಗ ಬಲಿದಾನದಿಂದ ದೇಶದ ರಕ್ಷಣೆಯನ್ನು ಮಾಡುತ್ತಿದ್ದಾರೆ. ಕಾರ್ಗಿಲ್‌ನಂತಹ ಪ್ರದೇಶದಲ್ಲಿ ಯುದ್ಧ ಮಾಡುವದು ಸುಲಭವಲ್ಲ. ಅಂತಹ ಸ್ಥಳದಲ್ಲಿ ಪಾಕಿಸ್ತಾನವನ್ನು ಹಿಮ್ಮೆಟ್ಟಿಸಿದ ದಿವಸ ಜುಲೈ 26. ಈ ವಿಜಯೋತ್ಸವವನ್ನು ದೇಶಾದ್ಯಂತ ಆಚರಿಸಲಾಗುತ್ತಿದ್ದು, ನಮ್ಮ ದೇಶದ ಸೈನಿಕರಿಗೆ ಧೈರ್ಯ ತುಂಬುವದು, ಅವರ ಸಾಹಸವನ್ನು ಮೆಚ್ಚುವದು ಪ್ರತಿಯೊಬ್ಬ ಭಾರತೀಯನ ಕರ್ತವ್ಯವಾಗಿದೆ ಎಂದರು. ಹಿರಿಯರಾದ ಎಂ.ಎಸ್. ಕರೀಗೌಡ್ರ ಮಾತನಾಡಿ, ಅಟಲ್ ಬಿಹಾರಿ ವಾಜಪೇಯಿಯವರ ನೇತೃತ್ವದಲ್ಲಿ ಅಂದಿನ ಸರ್ಕಾರ ಪಾಕಿಸ್ತಾನಕ್ಕೆ ದಿಟ್ಟ ಉತ್ತರ ನೀಡಿತು. ಇಂದು ಭಾರತ ಬಲಿಷ್ಠ ರಾಷ್ಟ್ರವಾಗಿದೆ. ಪಾಕಿಸ್ತಾನ ಎಷ್ಟೇ ಬಾರಿ ನಮ್ಮ ಮೇಲೆ ಆಕ್ರಮಣ ಮಾಡಿದರೂ ಅವರನ್ನು ಹಿಮ್ಮೆಟ್ಟಿಸುವ ಧೈರ್ಯ ನಮ್ಮ ಸೈನಿಕರಲ್ಲಿದೆ ಎಮದರು.



> ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಮಾತನಾಡಿ, ನಮ್ಮ ಸೈನಿಕರು ತಮ್ಮ ಕುಟುಂಬವನ್ನು ಬಿಟ್ಟು ದೇಶದ ರಕ್ಷಣೆಗಾಗಿ ದುಡಿಯುತ್ತಿದ್ದಾರೆ. ಅವರು ದೇಶ ಕಾಯುತ್ತಿರುವುದರಿಂದ ಇಂದು ನಾವು ನಮ್ಮ ಮನೆಯಲ್ಲಿ ನೆಮ್ಮದಿಯಿಂದ ನಿದ್ರೆ ಮಾಡುತ್ತಿದ್ದೇವೆ ಎಂದರು.

ಶಹರ ಅಧ್ಯಕ್ಷರಾದ ಸುರೇಶ ಮರಳಪ್ಪನವರ ಮಾತನಾಡಿ, ನಮ್ಮ ದೇಶದ ಸೈನಿಕರಿಗೆ ಇಂದು ಪ್ರಧಾನಿ ನರೇಂದ್ರ ಮೋದಿಯವರು ಎಲ್ಲ ರೀತಿಯ ವ್ಯವಸ್ಥೆಯನ್ನು ಮಾಡಿ, ಸೈನಿಕರ ಎಲ್ಲ ಬೇಡಿಕೆಯನ್ನು ಇಡೇರಿಸಿದ್ದಾರೆ. ಪ್ರಧಾನಿ ಮೋದಿಯವರ ನೇತೃತ್ವದ ಸರ್ಕಾರ ಇವತ್ತು ಜಗತ್ತಿನಲ್ಲಿಯೇ ಅತಿ ಬಲಾಢ್ಯವಾದ ಸೈನಿಕರನ್ನು ಹೊಂದಿದ ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಅನಿಲ ಅಬ್ಬಿಗೇರಿ, ಅಶೋಕ ಸಂಕಣ್ಣವರ, ಸಂತೋಷ ಅಕ್ಕಿ, ಶಂಕರ ಕಾಕಿ, ಶಂಕರ ಕರಿಬಿಷ್ಠಿ, ಸುಧೀರ ಕಾಟಿಗರ, ಶಿವಪ್ಪ ಮುಳ್ಳಾಳ, ರಮೇಶ ಕುರ್ತ-ಕೋಟಿ, ಬಸವರಾಜ ಜಕ್ಕಲಿ, ರಮೇಶ ಸಜ್ಜಗಾರ, ದೇವೇಂದ್ರಪ್ಪ ಹೂಗಾರ, ರಾಚಯ್ಯ ಹೊಸಮಠ, ಗೈಬುಸಾಬ ಕಲೇಬಾಯಿ, ವಿಜಯಕುಮಾರ ಹಿರೇಮಠ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ವಿಜಯ ಹಿರೇಮಠ, ಕುಮಾರ ಪಾಟೀಲ, ವಿನಾಯಕ ಕಾಟ್ವಾ, ವಿನಾಯಕ ಹೊರಕೇರಿ, ಮಂಜು ದೂನವರ ಮುಂತಾದವರಿದ್ದರು.

## ಸಂಪಾದಕೀಯ

# ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆ: ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು

ಇತ್ತೀಚೆಗೆ ಸುಪ್ರೀಂ ಕೋರ್ಟ್ ನೀಡಿದ ಮಹತ್ವದ ತೀರ್ಪು ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಒಂದು ಹೊಸ ಆಶಾಕಿರಣವನ್ನು ಮೂಡಿಸಿದೆ. ಜಸ್ಟಿಸ್ ವಿಕ್ರಮ್ ನಾಥ್ ಮತ್ತು ಜಸ್ಟಿಸ್ ಸಂದೀಪ್ ಮೆಹ್ತಾ ಅವರ ಈ ತೀರ್ಪು, ಖಾಸಗಿ ಕೋಚಿಂಗ್ ಕೇಂದ್ರಗಳು, ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು ಮತ್ತು ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ನ್ಯಾಯಾಲಯಕ್ಕೆ ಇರುವ ಅಧಿಕಾರವನ್ನು ಒತ್ತಿ ಹೇಳಿದೆ.

ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ಓಇಇಖ ಆಕಾಂಕ್ಷಿ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ತೀರ್ಪು ಹೊರಬಿದ್ದಿದೆ. ಇದು ಕೇವಲ ಒಂದು ಪ್ರಕರಣಕ್ಕೆ ಸೀಮಿತವಾಗಿಲ್ಲದೆ, ದೇಶದಾದ್ಯಂತ ಇರುವ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ಅನ್ವಯಿಸುತ್ತದೆ.

ಇಂದು, ಲಕ್ಷಾಂತರ ವಿದ್ಯಾರ್ಥಿಗಳು ತಮ್ಮ ಕನಸುಗಳನ್ನು ನನಸು ಮಾಡಿಕೊಳ್ಳಲು ವಿವಿಧ ಶಿಕ್ಷಣ ಸಂಸ್ಥೆಗಳನ್ನು, ವಿಶೇಷವಾಗಿ ಕೋಚಿಂಗ್ ಕೇಂದ್ರಗಳನ್ನು ಆಶ್ರಯಿಸುತ್ತಾರೆ.

ಆದರೆ, ಅಲ್ಲಿನ ಒತ್ತಡ, ಸುರಕ್ಷತೆಯ ಕೊರತೆ ಮತ್ತು ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಅನೇಕ ವಿದ್ಯಾರ್ಥಿಗಳ ಜೀವನವನ್ನು ನುಂಗಿ ಹಾಕಿವೆ. ಈ ತೀರ್ಪು ಈ ಸಮಸ್ಯೆಯ ಗಂಭೀರತೆಯನ್ನು ಎತ್ತಿ ಹಿಡಿದಿದೆ.

ನ್ಯಾಯಾಲಯದ ಪ್ರಕಾರ, ಶಿಕ್ಷಣ ಸಂಸ್ಥೆಗಳು ಕೇವಲ ಪಾಠಗಳನ್ನು ಕಲಿಸುವ ಕೇಂದ್ರಗಳಲ್ಲ, ಅವು ವಿದ್ಯಾರ್ಥಿಗಳ ಮಾನಸಿಕ ಮತ್ತು ದೈಹಿಕ ಯೋಗಕ್ಷೇಮವನ್ನು ಕಾಪಾಡುವ ಜವಾಬ್ದಾರಿಯನ್ನು ಸಹ ಹೊಂದಿವೆ.

ಈ ತೀರ್ಪು ಇಡೀ ಶಿಕ್ಷಣ ಸಮುದಾಯಕ್ಕೆ ಒಂದು ಎಚ್ಚರಿಕೆಯ ಗಂಟೆಯಾಗಿದೆ. ಪ್ರತಿಯೊಂದು ಸಂಸ್ಥೆಯು ತನ್ನ ವಿದ್ಯಾರ್ಥಿಗಳ ಸುರಕ್ಷತೆಗೆ ಆದ್ಯತೆ ನೀಡಬೇಕು ಮತ್ತು ಪಾರದರ್ಶಕತೆ, ಮಾನಸಿಕ ಬೆಂಬಲ, ಹಾಗೂ ಸುರಕ್ಷಿತ ವಾತಾವರಣವನ್ನು ಖಚಿತಪಡಿಸಿಕೊಳ್ಳಬೇಕು. ಇದು ಕೇವಲ ತನಿಖೆಯ ಆದೇಶವಲ್ಲ, ಬದಲಾಗಿ ಶಿಕ್ಷಣ ವ್ಯವಸ್ಥೆಯಲ್ಲಿ ಗುಣಾತ್ಮಕ ಬದಲಾವಣೆ ತರುವ ಒಂದು ಕರೆ.

## ಆಲೋಚಿಸಿ ಮುನ್ನಡೆದಾಗ ಬದುಕು ತನ್ನಷ್ಟಕ್ಕೆ ತಾನೇ ಸಿದ್ಧವಾಗುತ್ತದೆ

# ಆನಂದಮಯ ಬದುಕಿನ ಸ್ವರೂಪ



ಡಿವಿಜಿ ಅವರ ಮಂಕುತಿಮ್ಮನ ಕಗ್ಗದ ಹಲವು ಸಾಲುಗಳನ್ನು ಓದುವಾಗ ನಿಜಕ್ಕೂ ಬದುಕು ಇಷ್ಟೊಂದು ಆನಂದಮಯವಾಗಿದೆಯೇ ಎನ್ನುವ ಕುತೂಹಲ ಮೂಡಿತು. ಅದು ಬೇಕು, ಇದು ಬೇಕು, ಮತ್ತೊಂದು ಬೇಕೆನ್ನುವ ಲಂಕೆ ಇಲ್ಲದ ಮನಸ್ಸಿಗೆ ಇದ್ದುದರಲ್ಲಿ ಬದುಕುವ ಕಲೆ ಹೀಗೂ ಇದೆ ಎನ್ನುವ ಸಾರ ಅರ್ಥವಾಯಿತು. ಬಹುಶಃ ನಮ್ಮೆಲ್ಲ ಆಸೆಗಳಿಗೆ ಕೆಲವೊಮ್ಮೆ ಮಿತಿಯೇ ಇರದು. ಮಿತಿ ಇಲ್ಲದ ಆಸೆಗಳು ಹಲವು ರೀತಿಯ ಮನೋಕ್ಲೇಶಗಳಿಗೆ ಕಾರಣವಾಗಬಹುದು. ಹಾಗಾಗಿ ಹಲವು ಅನುಭವಿಕ ನುಡಿಗಳನ್ನು ಆಲಿಸಿ, ಪಾಲಿಸಿದಾಗ ಆನಂದಮಯ ಬದುಕಿನ ಸ್ವರೂಪ ಅರ್ಥವಾಗುತ್ತದೆ.

**ಔದಾರ್ಯ ತಾಯಿ ನೀತಿಗೆ,**
**ಧೈರ್ಯವೇ ತಂದೆ ।**
**ಸ್ವಾಧಿಪತ್ಯದೆ ನೀನು ಬಾಳನಾಳುವೊಡೆ**
**ಹೋದುದನು ನೆನೆಯದಿರು,**
**ಬರುವುದಕೆ ಸಿದ್ಧನಿರು।**
**ಆದನಿತು ಸಂತೋಷ**
**– ಮಂಕುತಿಮ್ಮ॥**

ಡಿವಿಜಿ ಅವರ ಮಂಕುತಿಮ್ಮನ ಕಗ್ಗದ ಈ ಸಾಲುಗಳು ಸಂತೋಷಮಯ ಬದುಕಿನ ಸೂತ್ರವನ್ನು ತಿಳಿಸಿವೆ. ನಮ್ಮ ನಡೆ-ನುಡಿಗಳನ್ನು ತಿದ್ದುವ, ಹೀಗಿದ್ದರೆ ಸೂಕ್ತ ಎಂದು ಸೂಕ್ಷ್ಮವಾಗಿ ನಮ್ಮಂತರಾಳಕ್ಕೆ ತಿಳಿಸುವ ಮರ್ಮ ಈ ಕಗ್ಗದಲ್ಲಿದೆ. ಬದುಕನ್ನು ಬದುಕಿಸಲು ಸದಾ ಸಿದ್ಧನಾಗಿರು. ಏರಿಳಿತಗಳು ಜೀವನದಲ್ಲಿ ಸಹಜ. ಅವುಗಳಿಗೆ ಕುಗ್ಗದೆ, ಕೆಲವೊಮ್ಮೆ ಹಿಗ್ಗದೆ ಸಮಚಿತ್ತತೆಯನ್ನು ಕಾಯ್ದುಕೊಂಡು ಸಾಗುವ ರೀತಿಯನ್ನು ಈ ಮೇಲಿನ ಸಾಲುಗಳು ತಿಳಿಸುತ್ತವೆ. ಹೆತ್ತ ತಾಯಿಯದು ಸ್ತ್ರೀ ಸಹಜವಾದ ಉದಾರ ಗುಣ. ಮಾತೃ ಪ್ರೇಮಕ್ಕೆ ಸರಿಸಾಟಿ ಇನ್ನೊಂದಿಲ್ಲ. ತಾಳ್ಮೆ, ಸಹನೆ, ಉದಾರತೆ ತಾಯಿ ಎನ್ನುವ ಶಕ್ತಿಗಿರುವ ಮೌಲ್ಯವದು. ಹಾಗಾಗಿ ನಮ್ಮ ಜೀವನವು ಸಹ ತಾಯಿಯಲ್ಲಿರುವ ಉದಾರ ಗುಣದ ಅನುಕರಣೆ ಆಗಬೇಕು. ಅದೇ ಬದುಕಿನ ನೀತಿ ಆಗಬೇಕು.

ನೀತಿ ಎಂದರೆ ಎಲ್ಲರೂ ಪಾಲಿಸಲು ಯೋಗ್ಯವಾದ ಒಂದು ಮೌಲ್ಯ. ನೀತಿಯಲ್ಲಿಯೇ ಬದುಕಿನ ಸುಂದರತೆ ಅಡಗಿದೆ. ಹೇಗೆ ಬೇಕೋ ಹಾಗೆ ಜೀವನ ನಿರ್ವಹಿಸುವುದಲ್ಲ. ಬದಲಾಗಿ ಮಾತೃ ಪ್ರೇಮದಲ್ಲಿರುವ ಉದಾರ ಗುಣ ಬದುಕಿನ ನೀತಿಯಾಗಬೇಕು ಎನ್ನುವ ಮಾತು ಬದುಕಿಗೆ ಭದ್ರಬುನಾದಿಯಂತೆ. ಹಾಗೆಯೇ ನಮ್ಮ ಎಲ್ಲ ಬೇಕು ಬೇಡಿಕೆಗಳನ್ನು ಈಡೇರಿಸುವ ಜೀವ, ಜವಾಬ್ದಾರಿಗಳನ್ನು ಹೊತ್ತು ಸಾಗುವ ನಮ್ಮ ಬದುಕಿನ ಮೊಟ್ಟ ಮೊದಲ ಹೀರೋ ನಮ್ಮ ತಂದೆ. ತಂದೆಯ ಸ್ವಭಾವವೇ ಧೈರ್ಯ. ಜೀವನದ ಪ್ರತಿ ಹಂತದಲ್ಲೂ ಧೈರ್ಯ ಅವಶ್ಯವಾಗಿ ಬೇಕು. ಅದಿಲ್ಲದಿದ್ದರೆ ಬದುಕು ಶೂನ್ಯ ಎನಿಸಿಬಿಡುತ್ತದೆ. ನಮ್ಮ ನಮ್ಮ ಸ್ವಂತ ಶಕ್ತಿಯಿಂದ ಬದುಕಿನ ಎಲ್ಲಾ ಆಯಾಮಗಳನ್ನು ಅವಲೋಕಿಸಬೇಕು, ಹಾಗೆಯೆ ವಿವೇಚಿಸಬೇಕು. ಅಂದಾಗ ಮಾತ್ರ ಪರಿಪೂರ್ಣ ಜೀವನವನ್ನು ಮುನ್ನಡೆಸಲು ಸಾಧ್ಯ.

ಹಾಗಾಯಿತು, ಹೀಗಾಯಿತು ಎಂದು ಭೂತಕಾಲದ ಸನ್ನಿವೇಶಗಳನ್ನು ನೆನೆಯುತ್ತಾ, ಕೊರಗುತ್ತಾ ಕೂತರೆ ಮುಂದಿನ ಹೆಜ್ಜೆ ಸಾಗದು. ಚಿಂತಿಸುತ್ತಾ ಕೂಡುವುದರಿಂದ ಯಾವುದಕ್ಕೂ ಪರಿಹಾರವಿಲ್ಲ. ಬದಲಾಗಿ ನಮ್ಮಲ್ಲಿ ವಿಶ್ಲೇಷಣಾತ್ಮಕ ಸಾಮರ್ಥ್ಯದ ಮೂಲಕ ಆಲೋಚಿಸಿ ಮುನ್ನಡೆದಾಗ ಬದುಕು ತನ್ನಷ್ಟಕ್ಕೆ ತಾನೇ ಸಿದ್ಧವಾಗುತ್ತದೆ. ಜೊತೆಗೆ ನಮ್ಮನ್ನು ಗುರಿಯೆಡೆಗೆ ಕೊಂಡೊಯ್ಯುತ್ತದೆ. ಇದ್ದುದರಲ್ಲಿ ಸಂಭ್ರಮಿಸುವ ಸೌಜನ್ಯವನ್ನು ಕಲಿಯಲೇಬೇಕು. ಇಲ್ಲವಾದರೆ ಬದುಕಿನ ಯಾವ ಕ್ಷಣವನ್ನು ಆನಂದಮಯವಾಗಿ ಅನುಭವಿಸಲು, ಆಸ್ವಾದಿಸಲು ಆಗದು.

ಒಟ್ಟಾರೆಯಾಗಿ ಹೆತ್ತ ತಂದೆ-ತಾಯಿಯ ಗುಣಧರ್ಮವನ್ನು ತಿಳಿಸುವ ಈ ಮಂಕುತಿಮ್ಮನ ಸಾಲುಗಳು ಬದುಕಿನ ಮಾರ್ಗದರ್ಶಿಯಂತಿವೆ. ವಾಸ್ತವದಲ್ಲಿ ನಮ್ಮನ್ನು ಹೆತ್ತು ಹೊತ್ತು, ಸಾಕಿ ಸಲಹುವ, ಜೊತೆಗೆ ಪ್ರೀತಿ ವಾತ್ಸಲ್ಯ ಮಮತೆ ಮಮಕಾರವನ್ನು ನೀಡಿ ರಕ್ಷಿಸುವ ತಂದೆ-ತಾಯಿಗಳೇ ನಮ್ಮ ಬದುಕಿನ ಜೀವನಾಡಿಗಳು. ಅವರು ಬದುಕುವ ರೀತಿಯನ್ನೇ ಅರಿತರೆ ಸಾಕು ನಮ್ಮ ಬದುಕು ಹೇಗಿರಬೇಕು ಎನ್ನುವ ಚಿತ್ರಣ ಗೋಚರವಾಗುತ್ತದೆ. ಮುಕ್ಕೋಟಿ ದೇವರುಗಳಿಗಿಂತ ಹೆತ್ತ ತಂದೆ-ತಾಯಿಗಳೇ ಮೊದಲು ಎನ್ನುವ ವಾಸ್ತವತೆ ತಿಳಿದಾಗ, ಎಂತಹ ಸಂಕೀರ್ಣ ಸಂಗತಿಗಳು ಎದುರಾದರೂ ತಾಳ್ಮೆಯಿಂದ ಸನ್ನಿವೇಶವನ್ನು ಅರ್ಥೈಸಿಕೊಂಡು ಧೈರ್ಯದಿಂದ ಮುಂದೆ ಸಾಗುವ ಗುಣ ನಮ್ಮ ವ್ಯಕ್ತಿತ್ವದಲ್ಲಿ ರೂಢಿಯಾಗುತ್ತದೆ. ಆಗ ಬದುಕಿನ ಪ್ರತಿ ಕ್ಷಣವನ್ನು ಸಂತೋಷಮಯವಾಗಿಸಲು ಸಾಧ್ಯ.

ಇಲ್ಲಸಲ್ಲದ ಸಂಗತಿಗಳಿಂದ ದೂರವಿರಬೇಕು. ಬದುಕಿಗೆ ಉಪಯುಕ್ತವಾದ ವಿಚಾರಗಳ ಕಡೆಗೆ ಮಾತ್ರ ನಮ್ಮ ಗಮನವಿರಬೇಕು. ಮಾಡುವ ಕೆಲಸದಲ್ಲಿ ತಲ್ಲೀನತೆ, ಪ್ರಾಮಾಣಿಕತೆ, ಪ್ರಯತ್ನಶೀಲತೆ ಇದ್ದಾಗ ಖಂಡಿತವಾಗಿಯೂ ಅಂದುಕೊಂಡದ್ದನ್ನು ಸಾಧಿಸುತ್ತೇವೆ. ನಮ್ಮ ಜೀವನಕ್ಕಿಂತ ಇನ್ನೊಬ್ಬರ ಜೀವನದ ಇಳುಕು ನೋಟವನ್ನು ಮೊದಲು ಕೈಬಿಡಬೇಕು. ಅವರವರ ಜೀವನ ಅವರವರ ದೃಷ್ಟಿಕೋನಕ್ಕೆ ಬಿಟ್ಟಿದ್ದು. ಹಾಗಾಗಿ ಪರರ ಅನವಶ್ಯಕ ಸಂಗತಿಗಳ ಗೋಡವೆ ಸಲ್ಲದು. ನಕಾರಾತ್ಮಕ ಆಲೋಚನೆಗಳು ಬಂದಾಗ ಅದನ್ನು ಸಕಾರಾತ್ಮಕತೆಗೆ ತಿರುಗಿಸುವ ಜಾಣ್ಮೆಯು ನಮ್ಮ ಕೈಯಲ್ಲಿ ಇದೆ. ಮನುಷ್ಯ ಸಹಜ ಸ್ವಭಾವಗಳು ಕೆಲವೊಮ್ಮೆ ದಾರಿಯನ್ನು ತಪ್ಪಿಸೋದು ಉಂಟು. ಆದರೆ ಒಂದಿಷ್ಟು ಬುದ್ಧಿವಂತಿಕೆಯಿಂದ, ಸಂವೇದನಾಶೀಲತೆಯಿಂದ ಬದುಕಿನ ಗೊತ್ತು-ಗುರಿಗಳನ್ನು ತಿಳಿಯಬೇಕು. ಅಂದಾಗ ಮಾತ್ರ ಸಂತೋಷದ ಮೂಲ ನಮ್ಮಲ್ಲೇ ಅಡಗಿದೆ ಎನ್ನುವ ಸತ್ಯ ಅರಿವಾಗುತ್ತದೆ.

ಇಂದಿನ ಆಧುನಿಕ ಬದುಕಿನ ಜೀವನಶೈಲಿಯಲ್ಲಿ ಅವಶ್ಯಕತೆಗಿಂತ ಹೆಚ್ಚು ಸವಲತ್ತುಗಳನ್ನು ಪಡೆದಿದ್ದೇವೆ.

ಆದರೂ ಸಹ ನಮಗೆ ತೃಪ್ತಿಯೆಂಬುವ ಭಾವವೇ ಮೂಡದು. ಹಾಗಾಗಿ ಹಿರಿಯರು ಹೇಳಿದ್ದು ಮನುಷ್ಯನ ಆಸೆಗಳು ಅಪರಿಮಿತವಾಗಿವೆ ಎಂದು. ಆದರೆ ನಮ್ಮ ನಮ್ಮ ಪರಿಮಿತಿಯಲ್ಲಿ ಜೀವಿಸುವ ಕಲೆಯನ್ನು ಕಲಿತಾಗ ಬದುಕು ಅಷ್ಟೇ ಸುಂದರಮಯವಾಗುತ್ತದೆ. ಆಗ ನಮ್ಮಂತರಾಳದ ಆನಂದಕ್ಕೆ ಪರಿಮಿತಿಯೇ ಇಲ್ಲ.



**– ಸುಧಾ ಹುಚ್ಚಣ್ಣವರ.**
ಉಪನ್ಯಾಸಕರು,
ಲೇಖಕರು-ಗದಗ.

# ಜೈಲಿನಿಂದ ತಪ್ಪಿಸಿಕೊಂಡಿದ್ದ ಅಪರಾಧಿ ಬಾವಿಯಲ್ಲಿ ಪತ್ತೆ: ನಾಲ್ವರು ಅಧಿಕಾರಿಗಳು ಅಮಾನತು



**■ ವಿಜಯಸಾಕ್ಷಿ ಸುದ್ದಿ, ಕೇರಳ**

ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಅಪರಾಧಿ ಗೋವಿಂದಚಾಮಿ ಅಲಿಯಾಸ್ ಚಾರ್ಲಿ ಥಾಮಸ್ ಜೈಲಿನಿಂದ ತಪ್ಪಿಸಿಕೊಂಡ ಪ್ರಕರಣ ಸಂಬಂಧ ನಾಲ್ವರು ಅಧಿಕಾರಿಗಳನ್ನು ಕೇರಳ ಸರ್ಕಾರ ಶುಕ್ರವಾರ (ಜುಲೈ 25) ಅಮಾನತುಗೊಳಿಸಿದೆ.

ಸಹಾಯಕ ಜೈಲು ಮೇಲ್ವಿಚಾರಕ ರೇಜೊ, ಉಪ ಜೈಲು ಅಧಿಕಾರಿ ರೇಜಿಶ್ ಮತ್ತು ಸಹಾಯಕ ಜೈಲು ಅಧಿಕಾರಿಗಳಾದ ಸಂಜಯ್ ಮತ್ತು ಫರಿತ್ ಅಮಾನತುಗೊಂಡವರು. ಕಾರಾಗೃಹಗಳ ಉಪ ಮಹಾನಿರೀಕ್ಷಕರು (ಉತ್ತರ ವಲಯ) ನಡೆಸಿದ ಪ್ರಾಥಮಿಕ ತನಿಖೆಯಲ್ಲಿ ಈ ಅಧಿಕಾರಿಗಳ ಕರ್ತವ್ಯ ಲೋಪ ಕಂಡು ಬಂದಿದೆ. ಈ ಹಿನ್ನೆಲೆ ಕ್ರಮ ಕೈಗೊಳ್ಳಲಾಗಿದೆ ಎಂದು ವರದಿಯಾಗಿದೆ.

23 ವರ್ಷದ ಯುವತಿಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಗೋವಿಂದಚಾಮಿ, ಶುಕ್ರವಾರ ಮುಂಜಾನೆ ಕಣ್ಣೂರು ಕೇಂದ್ರ ಕಾರಾಗೃಹದಿಂದ ಪರಾರಿಯಾಗಿದ್ದ. ಪೊಲೀಸರ ಅಂದಾಜಿನ ಪ್ರಕಾರ, ಮುಂಜಾನೆ ಸುಮಾರು 4.15 ರಿಂದ 6.30ರ ನಡುವೆ ಆತ ಜೈಲಿನಿಂದ ತಪ್ಪಿಸಿಕೊಂಡಿದ್ದ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿರುವ ಕಣ್ಣೂರು ನಗರ ಪೊಲೀಸ್ ಆಯುಕ್ತ ನಿಧಿನ್ ರಾಜ್, ಬೆಳಿಗ್ಗೆ 6.30ರ ಸುಮಾರಿಗೆ ಗೋವಿಂದಚಾಮಿ ಜೈಲಿನಿಂದ ತಪ್ಪಿಸಿಕೊಂಡ ಬಗ್ಗೆ ನಮಗೆ ಮಾಹಿತಿ ಸಿಕ್ಕಿತು. ನಂತರ ರಾಜ್ಯಾದ್ಯಂತ ಶೋಧ ಕಾರ್ಯಾಚರಣೆ ಆರಂಭಿಸಲಾಯಿತು. ಕಣ್ಣೂರಿನ ಮೇಲೆ ವಿಶೇಷ ಗಮನ ಹರಿಸಲಾಯಿತು. ನೆರೆಯ ರಾಜ್ಯಗಳಿಗೂ ಮಾಹಿತಿ ನೀಡಲಾಗಿತ್ತು ಎಂದಿದ್ದಾರೆ.

## ಜುಲೈ 29, ನಾಗರ ಪಂಚಮಿ ಹಬ್ಬದ ನಿಮಿತ್ತ ವಿಶೇಷ ಲೇಖನ

# ಸಹೋದರತೆಯ ಪ್ರತೀಕ ನಾಗರಪಂಚಮಿ

ನಾಗರ ಪಂಚಮಿಯು ಉತ್ತರ ಕರ್ನಾಟಕದವರಿಗೆ ದೊಡ್ಡ ಹಬ್ಬವಾಗಿದೆ. ಈ ಪಂಚಮಿ ತಿಥಿಯ ಅಧಿಪತಿಯಾದ ನಾಗದೇವತೆಯನ್ನು ಪೂಜಿಸಲಾಗುತ್ತದೆ. ಪೂಜೆಯ ಅಂಗವಾಗಿ ದೇವಸ್ಥಾನ ಹಾಗೂ ಹುತ್ತಗಳಿಗೆ ಭೇಟಿ ನೀಡಿ, ಎಲ್ಲ ಕೆಡುಕುಗಳಿಂದ ತಮ್ಮನ್ನು ರಕ್ಷಿಸಲೆಂದು ಬೇಡಿಕೊಂಡು ಜನರು ಹಾಲು ಮತ್ತು ಬೆಳ್ಳಿ ಆಭರಣಗಳನ್ನು ಅರ್ಪಿಸುತ್ತಾರೆ.

ಈ ಹಿಂದೆ ಒಂದು ಊರಿನಲ್ಲಿ ಒಬ್ಬಳು ತಂಗಿ ಮತ್ತು ಅವಳಿಗೆ ನಾಲ್ಕು ಜನ ಅಣ್ಣಂದಿರು ಇದ್ದರು. ಮನೆಯವರೆಲ್ಲಾ ಸೇರಿ ಒಟ್ಟಿಗೆ ನಾಗರ ಪಂಚಮಿಯಂದು ಪೂಜಾ ಕಾರ್ಯಕ್ರಮದಲ್ಲಿ ತೊಡಗಿದ್ದರು. ಆ ಸಮಯದಲ್ಲಿ ಅಲ್ಲಿಗೆ ನಾಗರಹಾವೊಂದು ರಭಸದಿಂದ ಬಂದು ನಾಲ್ಕು ಜನ ಅಣ್ಣಂದಿರನ್ನು ಬಲಿ ತೆಗೆದುಕೊಂಡಿತು. ನಂತರ ಆ ತಂಗಿಯು ಅಣ್ಣಂದಿರನ್ನು ಕಳೆದುಕೊಂಡ ನೋವನ್ನು ತಡೆಯಲಾರದೆ ಆ ನಾಗರಹಾವಿಗೆ ಹೇಳಿದಳು, ನನ್ನ ನಾಲ್ಕು ಜನ ಅಣ್ಣಂದಿರಲ್ಲಿ ಒಬ್ಬರನ್ನಾದರೂ ಬದುಕಿಸಿಕೊಡು, ನಾನು ಯಾರನ್ನು 'ಅಣ್ಣ' ಎಂದು ಕರೆಯಲಿ ಎಂದು ಕಣ್ಣೀರಿಟ್ಟಳು. ತದನಂತರ ಆ ನಾಗರ ಹಾವು ಆಕೆಯ ಮಾತಿಗೆ ಕಿವಿಗೊಟ್ಟು, ಅಣ್ಣಂದಿರ ಬಳಿ ಬಂದು ಒಬ್ಬ ಅಣ್ಣನನ್ನು ಪ್ರಾಣಾಪಾಯದಿಂದ ಕಾಪಾಡಿತು. ನಂತರ ಅಣ್ಣ-ತಂಗಿ ಇಬ್ಬರೂ ಸೇರಿ ನಾಗರಪಂಚಮಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಶ್ರಾವಣ ಮಾಸವೆಂದರೆ ಹಿಂದೂಗಳಿಗೆ ಪವಿತ್ರವಾದ ಹಬ್ಬವಾಗಿದೆ. ಈ ಮಾಸದ ಚತುರ್ಥಿ ಹಾಗೂ ಪಂಚಮಿಯಂದು ಬರುವ ನಾಗರ ಪಂಚಮಿಯ ಪೌರಾಣಿಕ ಹಿನ್ನೆಲೆಯೂ ವಿಶಿಷ್ಟವಾಗಿದೆ.



ಜನಮೇಜಯ ತಂದೆಯ ಪರೀಕ್ಷಿತರಾಜನ ಸಾವಿಗೆ ಸರ್ಪ ಕಾರಣವಾಗುತ್ತದೆ. ಈ ಹಿನ್ನೆಲೆಯಲ್ಲಿ ಭೂ ಲೋಕದಲ್ಲಿರುವ ಸರ್ಪಗಳನ್ನು ನಾಶ ಮಾಡಲು ಸರ್ಪಯಜ್ಞ ಆರಂಭಿಸುತ್ತಾನೆ. ಈ ಸಂದರ್ಭದಲ್ಲಿ ಸರ್ಪಗಳ ಸಂಬಂಧಿಯಾದ ಆಸ್ತಿಕ ಮುನಿಯು ಪರೀಕ್ಷಿತರಾಜರನ್ನು ಸಮಾಧಾನಗೊಳಿಸಿ, ಪ್ರಾಣಿ ಹಿಂಸೆ ಮಹಾಪಾಪ ಎಂದು ಹೇಳಿ ಸರ್ಪಯಜ್ಞ ನಿಲ್ಲಿಸುತ್ತಾನೆ. ಈ ದಿನವನ್ನೇ ನಾಡಿನಲ್ಲಿ ನಾಗರ ಪಂಚಮಿಯಾಗಿ ಆಚರಿಸುತ್ತಾರೆ ಎಂದು ಪೌರಾಣಿಕ ಕಥೆ ಹೇಳುತ್ತದೆ.

ನಾಗರಪಂಚಮಿಯ ದಿನ ಅರಿಶಿನ ಅಥವಾ ರಕ್ತಚಂದನದಿಂದ ಮಣೆಯ ಮೇಲೆ ನವನಾಗಗಳ ಆಕೃತಿಗಳನ್ನು ಬಿಡಿಸಿ ಅವುಗಳ ಪೂಜೆಯನ್ನು ಮಾಡಿ ಹಾಲು ಮತ್ತು ಅರಳಿನ ನೈವೇದ್ಯವನ್ನು ಅರ್ಪಿಸಬೇಕು. ಮಹಿಳೆಯರು ತಮ್ಮ ಪತಿಗಾಗಿ ಮಂಗಳವಾರ ಉಪವಾಸವನ್ನು ಮಾಡುತ್ತಾರೆ. ಶ್ರಾವಣ ಸೋಮವಾರದಂತೆಯೇ ಮಂಗಳವಾರವೂ ಬಹಳ ಮುಖ್ಯ. ಈ ವರ್ಷ ನಾಗರಪಂಚಮಿ ದಿನವೇ ಮಂಗಳಗೌರಿ ವ್ರತ ಸಹ ಆಚರಿಸುವುದರಿಂದ ನಾಗಪಂಚಮಿಯಂದು ನಾಗದೇವತೆಯೊಂದಿಗೆ ಶಿವ ಮತ್ತು ತಾಯಿ ಪಾರ್ವತಿಯನ್ನೂ ಪೂಜಿಸಲಾಗುವುದು. ಹೀಗಾಗುವುದು ಅಪರೂಪ. ಆದ್ದರಿಂದ ನಾಗದೇವತೆ ಮತ್ತು ಶಿವ-ಪಾರ್ವತಿಯನ್ನು ಪೂಜಿಸುವುದರಿಂದ ಹೆಚ್ಚಿನ ಫಲಿತಾಂಶ ಸಿಗುತ್ತದೆ ಎನ್ನಲಾಗುತ್ತದೆ.

ಸಾಮಾನ್ಯವಾಗಿ ನಾಗರ ಪಂಚಮಿ ಆರಂಭವಾಗುವುದೇ ನಾಗರ ಅಮವಾಸ್ಯೆಯಿಂದ. ಅಮವಾಸ್ಯೆಯ ನಂತರ ಮೂರನೆಯ ದಿನ ರೊಟ್ಟಿ ಹಬ್ಬ, ನಾಲ್ಕನೇ ದಿನ ಚತುರ್ಥಿ, ಐದನೇ ದಿನ ಪಂಚಮಿ ಆಚರಿಸುತ್ತಾರೆ. ರೊಟ್ಟಿ ಹಬ್ಬದಂದು ಮನೆ ಮನೆಯಲ್ಲಿ ಬಗೆ ಬಗೆಯ ಪಲ್ಯೆ, ಚಟ್ನಿ, ರೊಟ್ಟಿ, ಚಪಾತಿಯನ್ನು ತಯಾರಿಸಿ ತಮ್ಮ ಅಕ್ಕ-ಪಕ್ಕದ ಮನೆಯವರೊಂದಿಗೆ ಪರಸ್ಪರ ಹಂಚಿಕೊಳ್ಳುತ್ತಾರೆ. ಇದಕ್ಕೆ ಕಾರಣ ನಾಗರ ಪಂಚಮಿ ಹಬ್ಬದ ನಾಲ್ಕೈದು ದಿನ ಉಂಡಿ, ಹೋಳಿಗೆ ಮಾಡುವುದರಿಂದ ಅಷ್ಟೂ ದಿನಕ್ಕೆ ಬೇಕಾಗುವಷ್ಟು ಸಜ್ಜಿ, ಜೋಳದ ಹಿಟ್ಟಿನಲ್ಲಿ ಎಳ್ಳು ಹಾಕಿ ರೊಟ್ಟಿ ತಯಾರಿಸುತ್ತಾರೆ. ಅದನ್ನೇ ಬಾಂಧವ್ಯ ರೂಪದಲ್ಲಿ ಹಂಚಿಕೊಳ್ಳುತ್ತಾರೆ.

ರೊಟ್ಟಿ ಹಬ್ಬದ ನಂತರ ಶೇಂಗಾ ಉಂಡಿ, ಅಳ್ಳಿಟ್ಟು ಉಂಡಿ, ಎಳ್ಳುಂಡಿ, ಬುಂದಿ ಗಳಿಗೆ ಉಂಡಿ ಹಾಗೂ ಚಕ್ಕುಲಿ ಸೇರಿ ಬಗೆ ಬಗೆಯ ಉಂಡಿಗಳನ್ನು ತಯಾರಿಸುತ್ತಾರೆ. ಈ ಉಂಡಿಗಳನ್ನು ಶ್ರಾವಣ ಮಾಸ ಪೂರ್ತಿ ತಿನ್ನುವುದು ವಾಡಿಕೆ. ಇನ್ನೂ ಬೇರೆ ಬೇರೆ ಊರುಗಳಲ್ಲಿರುವ ತಮ್ಮ ಸಂಬಂಧಿಕರಿಗೆ ಉಂಡಿ ಕೊಟ್ಟು ತರುವ ಸಂಪ್ರದಾಯವಿದೆ. ಅದರಲ್ಲಿಯೂ ತವರ ಮನೆಯಿಂದ ಉಂಡಿ ಬರಲೇಬೇಕು. ಇದು ಸಹೋದರ-ಸಹೋದರಿಯರ ಮಧ್ಯೆ ಬಾಂಧವ್ಯಕ್ಕೆ ಸಾಕ್ಷಿಯಾಗುತ್ತದೆ.

ನಾಗರ ಪಂಚಮಿಯು ರೈತರ ಹಬ್ಬವಾಗಿದೆ. ಅದರಲ್ಲಿಯೂ ಮುಂಗಾರು ಬೆಳೆ ಬರುವ ಹಿನ್ನೆಲೆಯಲ್ಲಿ ರೈತರಿಗೆ ಇದು ಸಂಭ್ರಮದ ಹಬ್ಬ. ವಿಷ ಜಂತು ಎಂದು ಕರೆಯುವ ಹಾವುಗಳು ರೈತರಿಗೆ ಕೃಷಿ ಸ್ನೇಹಿಗಳಾಗಿವೆ. ಮಣ್ಣಿನಲ್ಲಿರುವ ಕೀಟಗಳನ್ನು ತಿನ್ನುವ ಹಾವುಗಳು ಭೂಮಿಯ ಫಲವತ್ತಾದ ಪ್ರದೇಶದಲ್ಲಿಯ ಹುತ್ತದಲ್ಲಿ ವಾಸವಾಗಿರುತ್ತವೆ ಎಂಬ ನಂಬಿಕೆ ಇದೆ. ಇದೇ ಕಾರಣಕ್ಕೆ ರೈತರು ನಾಗರ ಪಂಚಮಿಯಿಂದ ವಿಷಜಂತುಗಳು ಮನುಷ್ಯರಿಗೆ ಕಾಟ ನೀಡದೆ, ಭೂಮಿಯಲ್ಲಿಯ ಕೀಟಗಳನ್ನು ತಿಂದು ಫಸಲು ಕೈಗೆ ಬರಲಿ ಎಂಬ ಕಾರಣಕ್ಕೆ ಹುತ್ತಕ್ಕೆ ಹಾಲೆರೆಯುತ್ತಾರೆ. ಒಟ್ಟಾರೆಯಾಗಿ ನಾಗರಪಂಚಮಿಯ ದಿನ ಏನನ್ನೂ ಹೆಚ್ಚಬಾರದು, ಕೊಯ್ಯಬಾರದು, ಒಲೆಯ ಮೇಲೆ ತವೆಯನ್ನು ಇಡಬಾರದು ಹಾಗೂ ಭೂಮಿಯನ್ನು ಅಗೆಯಬಾರದು ಮುಂತಾದ ನಿಷೇಧ ನಿಯಮಗಳನ್ನು ಹಿರಿಯರು ಈ ದಿನ ಪಾಲಿಸುತ್ತಾ ಬಂದಿರುವ ಪ್ರತೀತಿ ನಡುವೆಯೇ ರೊಟ್ಟಿ ಹಬ್ಬ ಮಾಡಿ, ಬಗೆ ಬಗೆಯ ಉಂಡಿ ಗಳನ್ನು ಮಾಡಿ, ನಾಗದೇವತೆಯನ್ನು ಪೂಜಿಸಿ, ಹುತ್ತಗಳಿಗೆ ಹಾಲೆರದು ಸಂಭ್ರಮದಿಂದ ಆಚರಿಸಿ, ಪ್ರೀತಿ, ವಿಶ್ವಾಸ ಬಂಧುತ್ವದೊಂದಿಗೆ ಸಹೋದರ ಮತ್ತು ಸಹೋದರಿಯರ ಸಂಬಂಧವನ್ನು ಗಟ್ಟಿಗೊಳಿಸುವ ಹಬ್ಬವಾಗಿ ಈ ನಾಗ ಪಂಚಮಿ ಬರುವ ವರ್ಷದವರೆಗೆ ಹರುಷದಿಂದ ಇರುವಂತೆ ಮಾಡುತ್ತದೆ.



**– ಬಸವರಾಜ ಎಮ್.ಯರಗುಪ್ಪಿ.**
ರಾಮಗೇರಿ, ಲಕ್ಷ್ಮೇಶ್ವರ.

# ರಸಗೊಬ್ಬರಕ್ಕಾಗಿ ಸೊಸೈಟಿ ಅಧಿಕಾರಿಗಳಿಗೇ ದಿಗ್ಬಂಧನ!



**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ತಾಲೂಕಿನ ವಿವಿಧೆಡೆ ಯೂರಿಯಾ ರಸಗೊಬ್ಬರಕ್ಕಾಗಿ ರೈತರು ಮುಗಿಬಿದ್ದು ಗದ್ದಲ, ಗಲಾಟೆ ನಡೆಸಿದ್ದು, ಹಲುವಾಗಲು ಗ್ರಾಮದಲ್ಲಿ ವಿವಿಧೋದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಕಚೇರಿಗೆ ಬೀಗ ಜಡಿದು, ಅಧಿಕಾರಿಗಳಿಗೆ ದಿಗ್ಬಂಧನ ಹಾಕಿ ಪ್ರತಿಭಟನೆ ನಡೆಸಿದ ಘಟನೆ ಬುಧವಾರ ನಡೆದಿದೆ.

ಕಳೆದ ವಾರದಿಂದ ತಾಲೂಕಿನಲ್ಲಿ ಸತತವಾಗಿ ಮಳೆ ಸುರಿಯುತ್ತಿದ್ದು, ಮೆಕ್ಕೆಜೋಳ ಸೇರಿದಂತೆ ವಿವಿಧ ಬೆಳೆಗಳು ಬೆಳವಣಿಗೆ ಹಂತದಲ್ಲಿ ಇರುವುದರಿಂದ ಯೂರಿಯಾ ಗೊಬ್ಬರಕ್ಕೆ ಸಾಕಷ್ಟು ಬೇಡಿಕೆ ಉಂಟಾಗಿದೆ. ಆದರೆ ಅಗತ್ಯ ಯೂರಿಯಾ ರಸಗೊಬ್ಬರ ಸಿಗದ ಪರಿಣಾಮ ಬುಧವಾರ ಬೆಳಿಗ್ಗೆಯಿಂದಲೇ ರೈತರು ಸೊಸೈಟಿಗಳ ಮುಂದೆ ಜಮಾಯಿಸಿ ಗೊಬ್ಬರ ನೀಡುವಂತೆ ಆಗ್ರಹಿಸಿದ್ದಾರೆ.

ಹಲುವಾಗಲು ವಿವಿಧೋದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಕಚೇರಿಗೆ ಮುತ್ತಿಗೆ ಹಾಕಿದ ರೈತರು, ಅಲ್ಲಿದ್ದ ಸೊಸೈಟಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಕೂಡಿ ಹಾಕಿ ಬಾಗಿಲಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸೊಸೈಟಿ ನಿರ್ದೇಶಕ ಎಸ್.ಪಿ. ಲಿಂಬ್ಯಾನಾಯ್ಕ, ಕಳೆದ 1 ತಿಂಗಳಿನಿಂದ ಗೊಬ್ಬರಕ್ಕಾಗಿ ಆಗ್ರಹಿಸುತ್ತಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಖಾಸಗಿ ಅಂಗಡಿಯವರು ಹೆಚ್ಚಿನ ಬೆಲೆಗೆ ಯೂರಿಯಾ ಗೊಬ್ಬರ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದರಲ್ಲದೆ, ಕೃತಕ ಅಭಾವ ಸೃಷ್ಟಿಸುತ್ತಿದ್ದಾರೆ ಎಂದು ದೂರಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಹಾಯಕ ಕೃಷಿ ನಿರ್ದೇಶಕ ವಿ.ಸಿ. ಉಮೇಶ, 600 ಚೀಲ ಗೊಬ್ಬರ ಬಳ್ಳಾರಿಯಿಂದ ಬರುತ್ತಿದ್ದು, ಕಾಯಿರಿ ಎಂದು ರೈತರಿಗೆ ಸಮಾಧಾನ ಹೇಳಿದರೂ ರೈತರು ಸುಮ್ಮನಾಗಲಿಲ್ಲ. ಅಂತಿಮವಾಗಿ ಹೊಸಪೇಟೆಯ ಜಂಟಿ ಕೃಷಿ ನಿರ್ದೇಶಕ ಎಸ್. ಮಂಜುನಾಥ ಆಗಮಿಸಿ ಇಂದು ರಾತ್ರಿ 32 ಟನ್ ಯೂರಿಯಾ ಗೊಬ್ಬರ ಬಳ್ಳಾರಿಯಿಂದ ಬರಲಿದೆ ಎಂದು ಹೇಳಿದರು. ಹರಪನಹಳ್ಳಿ ಪಟ್ಟಣದಲ್ಲಿ ಮಧ್ಯಾಹ್ನದ ಸಮಯದಲ್ಲಿ ಬಂದ ಗೊಬ್ಬರವನ್ನು ಪೋಲೀಸರ ನೆರವಿನೊಂದಿಗೆ ರೈತರಿಗೆ ವಿತರಣೆ ಮಾಡಲಾಯಿತು.

## ಅಮೂಲ್ಯ ವಿಶೇಷ ದತ್ತು ಸಂಸ್ಥೆಯಿಂದ ಮಕ್ಕಳಿಲ್ಲದ ದಂಪತಿಗಳಿಗೆ ಮಕ್ಕಳ ಹಸ್ತಾಂತರ

# ಸಂಸ್ಥೆಯ ಕಾರ್ಯ ಅಮೂಲ್ಯವಾದದ್ದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಪಾಲಕ-ಪೋಷಕರಿಲ್ಲದ ಮಕ್ಕಳನ್ನು ಪೋಷಿಸಿ ಮಕ್ಕಳಿಲ್ಲದ ದಂಪತಿಗೆ ದತ್ತು ನೀಡುವ ಕಾರ್ಯದಲ್ಲಿ ತನ್ನನ್ನು ಸಮರ್ಪಿಸಿಕೊಂಡಿರುವ ಸೇವಾ ಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ ಕಾರ್ಯ ನಿಜಕ್ಕೂ ಅಮೂಲ್ಯವಾದದ್ದು ಎಂದು ನೇತ್ರತಜ್ಞ ಡಾ. ವಿಜಯಕುಮಾರ ಸಜ್ಜನರ ಹೇಳಿದರು.

ಅವರು ಶುಕ್ರವಾರ ಬೆಟಗೇರಿಯ ಸೇವಾ ಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಈರ್ವರು ಮಕ್ಕಳನ್ನು ಮಕ್ಕಳಿಲ್ಲದ ಮುಂಬಯಿ ಹಾಗೂ ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯ ದಂಪತಿಗಳಿಗೆ ದತ್ತುಪೂರ್ವ ಪೋಷಕತ್ವದಡಿ ಕಾನೂನುರೀತ್ಯಾ ಹಸ್ತಾಂತರಿಸಿ ಮಾತನಾಡಿದರು.




ಮಕ್ಕಳಿಲ್ಲದ ದಂಪತಿಗಳ ಪಾಡು ಮಾನಸಿಕ ಹಿಂಸೆ ನೀಡುವಂತದ್ದು, ಸೂಕ್ಷ್ಮ ಮತ್ತು ಸಂವೇದನಾಶೀಲ ದಂಪತಿಗಳಿಗಂತೂ ಇದು ತೀವ್ರ ನೋವನ್ನುಂಟು ಮಾಡುವ ಸಂಗತಿಯಾಗಿದೆ. ಮಾನಸಿಕವಾಗಿ ನೊಂದಿರುವ ದಂಪತಿಗೆ ಕಾನೂನು ಪ್ರಕಾರ ದತ್ತು ನೀಡುವ ಮೂಲಕ ಅಂತಹ ದಂಪತಿಗಳ ಬದುಕಿನಲ್ಲಿ ಹೊಸ ಚೈತನ್ಯ ತುಂಬುವ ಕಾರ್ಯ ಮಾಡುತ್ತಿರುವ ಈ ಸಂಸ್ಥೆಯ ಕಾರ್ಯ ಅಭಿನಂದನೀಯ ಎಂದರು.

ಅತಿಥಿಯಾಗಿ ಗದಗ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಜಯದೇವಿ ಕವಲೂರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಮೇಶ ಕಳ್ಳಿಮನಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂದರ್ಭೋಚಿತವಾಗಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ವಹಿಸಿದ್ದರು.

ಮುಖ್ಯ ಅತಿಥಿ ಡಾ. ನಮ್ರತಾ ಸಜ್ಜನರ ಮಾತನಾಡಿ, ದಂಪತಿಗೆ ದೇವರು ಕರುಣಿಸುವ ವರವೇ ಸಂತಾನ ಭಾಗ್ಯ. ದಂಪತಿಗಳಲ್ಲಿ ಯಾವುದೇ ನ್ಯೂನತೆ ಇಲ್ಲದಿದ್ದರೂ ಸಹ ಮಕ್ಕಳಾಗದೇ ದಂಪತಿಗಳು ಅನುಭವಿಸುವ ನೋವು ಹೇಳಲಾಗದು. ಒಂದೆಡೆ ಬೇಡವಾದ ಮಗು, ಇನ್ನೊಂದೆಡೆ ಬೇಕಾದ ಮಗು ಇವೆರಡನ್ನೂ ಸರಿದೂಗಿಸಿಕೊಂಡು ಪರಿತ್ಯಕ್ತ ಮಗುವನ್ನು ಪೋಷಿಸಿ ಮಕ್ಕಳಿಲ್ಲದ ದಂಪತಿಗೆ ಕಾನೂನಿನ ಅಡಿಯಲ್ಲಿ ದತ್ತು ನೀಡುತ್ತಿರುವ ಸಂಸ್ಥೆಯ ಸೇವೆ ಅಭಿನಂದನೀಯ ಎಂದರು.

ಮಗುವನ್ನು ದತ್ತು ಪಡೆದ ಅಪೂರ್ಬ ಹಾಗೂ ಬಾಬಾಸಾಹೇಬ ದಂಪತಿಗಳು ಮಾತನಾಡಿ, ದೇವರು ವರ ಪ್ರಸಾದವಾಗಿ ಕರುಣಿಸಿದ ಈ ಮಗುವಿಗೆ ಉತ್ತಮ ಸಂಸ್ಕಾರ, ಒಳ್ಳೆಯ ಶಿಕ್ಷಣ ನೀಡಿ ಆದರ್ಶ ವ್ಯಕ್ತಿಯಾಗುವಂತೆ ಮಾಡುವದಾಗಿ ಹೇಳಿದರು.

ನಾಗವೇಣಿ ಕಟ್ಟಿಮನಿ ಸ್ವಾಗತಿಸಿದರು. ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷ ಮಂಜುನಾಥ ಚನ್ನಪ್ಪನವರ ಪರಿಚಯಿಸಿ, ಸಂಸ್ಥೆಯ ಸ್ಥೂಲ ಪರಿಚಯ ನೀಡಿದರು. ನರಸಿಂಹ ಕಾವಾರ್ತಿ ನಿರೂಪಿಸಿದರು, ರಾಜೇಶ ಖಟವಟೆ ವಂದಿಸಿದರು.

ಕಾರ್ಯಕ್ರಮದಲ್ಲಿ ಗುರುಸಿದ್ಧಪ್ಪ ಕೊಣ್ಣೂರ, ಲಲಿತಾಬಾಯಿ ಮೇರವಾಡೆ, ಪ್ರಕಾಶ ಗುಗ್ಗರಿ, ಪ್ರಮೋದ ಹಿರೇಮಠ, ಶ್ರೀಧರ ಕಾಂಬಳೆ, ಅಭಿಷೇಕ ಮಾಳೋದೆ, ಜ್ಯೋತಿ ಸಂಗಮದ, ಕೇಂದ್ರದ ಆಯಾಗಳು ಮುಂತಾದವರಿದ್ದರು.

## ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯಲ್ಲಿ ಡಿಜಿಟಲ್ ಬೋರ್ಡ್ ಸೌಲಭ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬೆಟಗೇರಿಯ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಶ್ರೀ ಎಲ್.ಎನ್. ಬದಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಸಲುವಾಗಿ ಡಿಜಿಟಲ್ (Smart interactive Board) ಬೋರ್ಡಿನ ಅಳವಡಿಕೆ ಮಾಡಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ಲೋಕನಾಥ ಕಬಾಡಿಯವರು ಸೌಲಭ್ಯವನ್ನು ಉದ್ಘಾಟಿಸಿ, ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಇದನ್ನು ಹೆಚ್ಚು ಹೆಚ್ಚು ಬಳಸುವುದರೊಂದಿಗೆ ಹೆಚ್ಚಿನ ಉಪಯೋಗ ಪಡೆದುಕೊಳ್ಳಬೇಕು ಎಂದರು. ಕಮಿಟಿಯ ಚೇರಮನ್ ಗೋವಿಂದರಾಜ ವಿ.ಬಸವಾ ಮಾತನಾಡಿ, ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಡಿಜಿಟಲ್ ತಂತ್ರಜ್ಞಾನದ ಉಪಯೋಗವನ್ನು ಪಡೆದುಕೊಂಡಾಗ ವಿದ್ಯಾರ್ಥಿ ಹೆಚ್ಚಿನ ಜ್ಞಾನ ಹಾಗೂ ಅಂಕಗಳನ್ನು ಪಡೆದುಕೊಳ್ಳಬಹುದು ಎಂದರು.

ಶಾಲೆಯ ವೈಸ್ ಚೇರಮನ್ ದತ್ತು. ಉ.ಪವಾರ್ ಮಾತನಾಡಿ, ಇದರ ಸಾಧಕ-ಬಾಧಕಗಳನ್ನು ವಿದ್ಯಾರ್ಥಿಗಳು, ಶಿಕ್ಷಕರು ಅರಿತುಕೊಳ್ಳಬೇಕು. ಹೀಗಾದಾಗ ಪ್ರತೀ ವರ್ಷವೂ ಪ್ರತೀ ತರಗತಿಗೆ ಇಂತಹ ಬೋರ್ಡನ್ನು ಅಳವಡಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕಮಿಟಿಯ ಸದಸ್ಯರುಗಳಾದ ಪ್ರಕಾಶ್ ಮಿಸ್ಕಿನ್ ಹಾಗೂ ಶಂಕರ್‌ಸಾ ಮೆರವಾಡೆ ಉಪಸ್ಥಿತರಿದ್ದರು.

### ಎಪಿಎಂಸಿ ಆವರಣದಲ್ಲಿ ಗಣಪತಿ ದೇವಸ್ಥಾನದ ಲೋಕಾರ್ಪಣೆ ಹಿನ್ನೆಲೆ

# ಶಿಲಾ ಮೂರ್ತಿಗಳ ಭವ್ಯ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಪಿಎಂಸಿ ಆವರಣದಲ್ಲಿ ಎಪಿಎಂಸಿ ವರ್ತಕರಿಂದ ನೂತನವಾಗಿ ನಿರ್ಮಾಣಗೊಂಡ ಗಣಪತಿ ದೇವಸ್ಥಾನದ ಲೋಕಾರ್ಪಣೆ ಮತ್ತು ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಶನಿವಾರ ಗಣಪತಿ, ಈಶ್ವರ, ನಂದಿ, ಮಾರುತಿ ಹಾಗೂ ನಾಗದೇವರ ಶಿಲಾ ಮೂರ್ತಿಗಳ ಭವ್ಯ ಮೆರವಣಿಗೆ ಜರುಗಿತು.



ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ಆದಯ್ಯ ವೃತ್ತ, ಗದಗ ನಾಕಾ, ಹೊಸ ಬಸ್ ನಿಲ್ದಾಣ, ಶಿಗ್ಲಿ ಕ್ರಾಸ್, ಪುರಸಭೆ, ಬಜಾರ್ ರಸ್ತೆ, ಹಾವಳಿ ಆಂಜನೇಯ ದೇವಸ್ಥಾನ, ವಿದ್ಯಾರಣ್ಯ ವೃತ್ತ, ಪರ್ವತ ಮಲ್ಲಯ್ಯ ದೇವಸ್ಥಾನದ ಮೂಲಕ ಎಪಿಎಂಸಿವರೆಗೆ ಸಾಗಿ ಸಂಪನ್ನಗೊಂಡಿತು. ಮೆರವಣಿಗೆಯ ಆರಂಭದಿಂದಲೂ ಮುಕ್ತಿಮಂದಿರ ಶ್ರೀಗಳೇ ಮೂರ್ತಿಗಳನ್ನಿರಿಸಿದ ಎತ್ತಿನ ಬಂಡಿಯನ್ನು ಮುನ್ನಡೆಸಿದರು.

ಈ ವೇಳೆ ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ಎಪಿಎಂಸಿ ವರ್ತಕರ ಸಂಘದ ಅಧ್ಯಕ್ಷ ಓಂಪ್ರಕಾಶ ಜೈನ್, ಸಂಗಪ್ಪ ಹನುಮಸಾಗರ, ಸಿದ್ದನಗೌಡ ಬಳ್ಳೊಳ್ಳಿ, ಬಸವೇಶ ಮಹಾಂತಶೆಟ್ಟರ, ಸುಭಾಷ ಓದುನವರ, ತೋಂಟೇಶ ಮಾನ್ವಿ, ಕುಬೇರಪ್ಪ ಮಹಾಂತಶೆಟ್ಟರ, ವಿಜಯಕುಮಾರ ಹತ್ತಿಕಾಳ, ಎಸ್.ಕೆ. ಕಾಳಪ್ಪನವರ, ಸಂತೋಷ ಬಾಳಿಕಾಯಿ, ಎನ್.ಎಸ್. ಪಾಟೀಲ, ನಿಂಗಪ್ಪ ಬನ್ನಿ, ರಾಜು ಕೊಟಗಿ, ವಿಜಯ ಬೂದಿಹಾಳ, ಸೋಮೇಶ ಉಪನಾಳ, ರಾಘವೇಂದ್ರ ಸದಾವರ್ತಿ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಉಪಾಧ್ಯಕ್ಷ ಫಿರ್ದೋಷ್ ಆಡೂರ, ರಾಮಣ್ಣ ಗಡದವರ, ನಿಂಗಪ್ಪ ಬನ್ನಿ, ಈರಣ್ಣ ಅಕ್ಕೂರ, ಎಂ.ಆರ್. ಪಾಟೀಲ, ಬಸವರಾಜ ಮಹಾಂತಶೆಟ್ಟರ, ನೀಲಪ್ಪ ಸಂಶಿ ಸೇರಿದಂತೆ ಅನೇಕರಿದ್ದರು.

ಜಿಟಿಜಿಟಿ ಮಳೆಯಲ್ಲಿಯೇ ಮೆರವಣಿಗೆಗೆ ದಕ್ಷಿಣ ಕನ್ನಡದ ಚಂಡಮದ್ದಳೆ, ಬೊಂಬೆ ಕುಣಿತ, ಲಕ್ಷ್ಮೇಶ್ವರದ ಪ್ರಸಿದ್ಧ ಜಾನಪದ ನೃತ್ಯ ಕುದುರೆಕಾರರ ಕುಣಿತ, ನಂದಿಕೋಲು ಕುಣಿತ ಸೇರಿ ಮತ್ತಿತರ ಕಲಾತಂಡಗಳು ಮತ್ತು ಮಹಿಳೆಯರ ಪೂರ್ಣಕುಂಭ ಮೆರವಣಿಗೆಯ ರಂಗು ಹೆಚ್ಚಿಸಿದ್ದವು. ಈ ವೇಳೆ 'ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ಉದ್ಘೋಷಗಳು ಮುಗಿಲು ಮುಟ್ಟಿದ್ದವು. ಎತ್ತಿನ ಬಂಡಿಯಲ್ಲಿ ಶೋಭಾಯಮಾನವಾಗಿದ್ದ ದೇವರ ಮೂರ್ತಿಗಳಿಗೆ ಎಲ್ಲರೂ ಭಕ್ತಿಯಿಂದ ನಮಿಸಿದರು.



## ನಾಗರ ಅಮವಾಸ್ಯೆ ನಿಮಿತ್ತ ಪಾಲಕಿ ಸೇವೆ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಹೊಸಪೇಟ ಚೌಕದ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ನಾಗರ ಅಮವಾಸ್ಯೆ ನಿಮಿತ್ತ ಪಾಲಕಿ ಭಕ್ತಿ ಸೇವಾ ಕೈಂಕರ್ಯ ಜರುಗಿತು. ಬೆಟಗೇರಿ ಕಾಳಿಕಾ ದೇವಸ್ಥಾನ ಟ್ರಸ್ಟ್ ಕಮಿಟಿಯ ಸದಸ್ಯರು ಯುವ ಪ್ರತಿಭಾವಂತ ಕರಕುಶಲಕರ್ಮಿ ಕುಮಾರ ಬಡಿಗೇರ ಕುಟುಂಬ ವರ್ಗದವರು ಮತ್ತು ಯುವ ಕಾಷ್ಠ ಕರಕುಶಲಕರ್ಮಿ ಮಂಜುನಾಥ ಅಶೋಕ ಬಡಿಗೇರ ದಂಪತಿಗಳು ನಾಗರ ಅಮವಾಸ್ಯೆಯ ಪಾಲಕಿ ಭಕ್ತಿ ಸೇವೆ ವಹಿಸಿದ್ದರು.

ಟ್ರಸ್ಟನ ಅಧ್ಯಕ್ಷ ಶ್ರೀಧರ ಕೊಣ್ಣೂರ, ಉಪಾಧ್ಯಕ್ಷ, ಜಾನಪದ ಕಲಾವಿದ ಅಶೋಕ ಸುತಾರ, ಹಿರಿಯ ಸದಸ್ಯರಾದ ಗೋಪಾಲ ಬಡಿಗೇರ ಕಾಳಿಕಾ ಸ್ತುತಿ ಪಠಣ ಮಾಡಿದರು. ನಾಗರ ಪಂಚಮಿ ಹಬ್ಬದ ನಿಮಿತ್ತ ಶಿಕ್ಷಕ, ಸಾಹಿತಿ ವಿಶ್ವನಾಥ ಕಮ್ಮಾರ ವಿಶೇಷ ಉಪನ್ಯಾಸದಲ್ಲಿ ಭೀಮನ ಅಮವಾಸ್ಯೆಯ ಸತಿಪತಿ ಮಹತ್ವ, ಸಹೋದರಿ ಸುಮಂಗಲಿಯರ ವ್ರತಾಚರಣೆ, ನಾಗರ ಪಂಚಮಿ ಆಚರಣೆಯ ಜನಪದ ವೈಜ್ಞಾನಿಕ ಹಿನ್ನಲೆಯ ಕುರಿತು ಉಪನ್ಯಾಸ ನೀಡಿದರು. ಗಾಯಿತ್ರಿ ಮಹಿಳಾ ಮಂಡಳದ ಸುಮಂಗಲೆಯರಿಂದ ಕಾಳಿಕಾ ಮಾತೆಯ ಮಹಾಮಂಗಳಾರತಿ ಸಂಪನ್ನಗೊಂಡಿತು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಹಿರಿಯ ಸದಸ್ಯರಾದ ಮಹೇಶ ಬಡಿಗೇರ, ನವರಾತ್ರಿ ಉತ್ಸವ ಕಮಿಟಿ ಅಧ್ಯಕ್ಷ ರಾಘವೇಂದ್ರ ಬೆಂತೂರ, ರಾಘವೇಂದ್ರ ಬಡಿಗೇರ, ವಿಶ್ವನಾಥ ಪತ್ತಾರ, ವಿಠ್ಠಲ ಬೆಂತೂರ, ವಿನಾಯಕ ರಾಮದುರ್ಗಾ, ಸಮಾಜದ ಹಿರಿಯರಾದ ಪ್ರಕಾಶ ಬಡಿಗೇರ, ರಮೇಶ ಪತ್ತಾರ, ಶ್ರೀಕಾಂತ ಬೆಂತೂರ, ಅರ್ಚಕ ಸುರೇಶ ಬಡಿಗೇರ, ಭಾಸ್ಕರ ಕಮ್ಮಾರ, ಮಂಜುನಾಥ ಬಡಿಗೇರ, ಚಂದ್ರಶೇಖರ ಬಡಿಗೇರ, ನಾರಾಯಣ ಸುತಾರ, ವೀರಪ್ಪ ಬಡಿಗೇರ, ಮನೋಜ ಬೆಂತೂರ, ವಿಜಯಕುಮಾರ ಬಡಿಗೇರ ಮುಂತಾದವರಿದ್ದರು.

ಸಾಕ್ಷಿ ಹುಯಿಲಗೋಳ ಪ್ರಾರ್ಥಿಸಿದರು. ಜ್ಯೋತಿ ಬಡಿಗೇರ ಸ್ವಾಗತಿಸಿದರು. ಅಶೋಕ ಸುತಾರ ನಿರೂಪಿಸಿದರು. ಲತಾ ಬಡಿಗೇರ ವಂದಿಸಿದರು.

### ಶ್ರೀ ಅಕ್ಕಮಹಾದೇವಿ ಕದಳಿಶ್ರೀ ಮಹಿಳಾ ವೇದಿಕೆಯಿಂದ ಅಮೃತ ಭೋಜನ-ಜ್ಞಾನ ಸಿಂಚನ

# ನಮ್ಮ ಸಂಸ್ಕೃತಿ ನಮ್ಮ ನೆಲದ ವೈಶಿಷ್ಟ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೇಶವು ಸಂಸ್ಕೃತಿಯ ನೆಲೆಬೀಡು. ನಮ್ಮ ಸಂಸ್ಕೃತಿ-ಪರಂಪರೆಗಳು ನಮ್ಮ ನೆಲದ ವೈಶಿಷ್ಟ್ಯಗಳು. ಹಿರಿಯರು, ಗುರುಗಳು ನಮ್ಮ ಆಸ್ತಿ. ಅವರ ಮಾರ್ಗದರ್ಶನದಲ್ಲಿ ಮಕ್ಕಳು ಮುನ್ನಡೆದು ಬದುಕನ್ನು ಸುಂದರವಾಗಿ ರೂಪಿಸಿಕೊಳ್ಳಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.




ಅವರು ಗದಗ ಜಿಲ್ಲಾ ಶರಣೆ ಶ್ರೀ ಅಕ್ಕಮಹಾದೇವಿಯ ಕದಳಿಶ್ರೀ ಮಹಿಳಾ ವೇದಿಕೆಯಿಂದ ಶ್ರಾವಣ ಮಾಸದ ಅಂಗವಾಗಿ 'ಅಮೃತ ಭೋಜನ ಜ್ಞಾನ ಸಿಂಚನ' ಕಾರ್ಯಕ್ರಮದಲ್ಲಿ ಗದುಗಿನ ಕೆ.ಎಚ್. ಪಾಟೀಲ ಬಡಾವಣೆಯ ಸರ್ಕಾರಿ ಶಾಲೆ ನಂ. 13ರಲ್ಲಿ ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಮಾತನಾಡಿದರು.

ಗದುಗಿನ ವಿಜಯಾ ಬುಕ್ ಡಿಪೋದ ಮಾಲೀಕರಾದ ದಿ. ಗಿರಿಜಮ್ಮ ಹಿರೇಮಠ ಇವರು ಪ್ರತಿ ವರ್ಷ ಸರ್ಕಾರಿ ಶಾಲೆಯ ಮಕ್ಕಳಿಗೆ ಸಿಹಿ ಭೋಜನದ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಕಾರ್ಯವನ್ನು ಕದಳಿಶ್ರೀ ವೇದಿಕೆಯ ಮುಖಾಂತರ ಹಮ್ಮಿಕೊಳ್ಳುತ್ತಿದ್ದರು. ಅದನ್ನು ಮುಂದುವರಿಸಿ ಅವರ ಮೊಮ್ಮಗ ವಿಜಯಕುಮಾರ ಹಿರೇಮಠ ಶಾಲಾ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಕೈ ಜೋಡಿಸುತ್ತಿರುವುದು ಹಿರಿಯರು ಹಾಕಿಕೊಟ್ಟ ಮಾರ್ಗದರ್ಶನವಾಗಿದೆ ಎಂದರು. ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಶರಣ ಸಂಕುಲದ ಶರಣೆ ಶ್ರೀ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯು ಸರ್ಕಾರಿ ಶಾಲೆಗಳಲ್ಲಿ ಅಮೃತ ಭೋಜನ ಜ್ಞಾನಸಿಂಚನ ಕಾರ್ಯಕ್ರಮವನ್ನು ಏರ್ಪಡಿಸಿ ಶಾಲಾ ಮಕ್ಕಳಿಗೆ ದಾನಿಗಳಿಂದ ಸಿಹಿ ಭೋಜನ ಜೊತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುವ, ಅಂಗವಿಕಲ ಮಕ್ಕಳಿಗೆ ಹೊದಿಕೆ, ಸ್ವೆಟರ್-ಸಾಕ್ಸ್ ಹಾಗೂ ತಾಯಿಯಂದಿರರಿಗೆ ಸೀರೆ ವಿತರಿಸಿ ಸನ್ಮಾನಿಸುವ ಕಾರ್ಯವನ್ನು ಮಾಡುತ್ತ ಬಂದಿದ್ದು, ಇದಕ್ಕೆ ದಾನಿಗಳೇ ಮುಖ್ಯ ಆಧಾರವಾಗಿದ್ದಾರೆ ಎಂದರು.

ಕಾರ್ಯಕ್ರಮದ ಪ್ರಾಯೋಜಕರಾದ ಪುಸ್ತಕ ಪ್ರಕಾಶಕ ವಿಜಯಕುಮಾರ ಹಿರೇಮಠ ಮಾತನಾಡಿ, ಶಿಕ್ಷಣವು ಬಾಳನ್ನು ಬೆಳಗಿಸಬಲ್ಲ ದೀವಿಗೆಯಾಗಿದೆ. ನಮ್ಮ ಬದುಕು ಸುಂದರವಾಗಬೇಕಾದರೆ ಹಿರಿಯರ ಮಾರ್ಗದರ್ಶನ ಅವಶ್ಯ. ಸರ್ಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸುವ ಕಾರ್ಯ ಕದಳಿಶ್ರೀ ವೇದಿಕೆಯಿಂದ ನಿರಂತರ ನಡೆದು ಬಂದಿದ್ದು, ಇದಕ್ಕೆ ನಮ್ಮ ಸಹಕಾರವೂ ಇದೆ ಎಂದರು.

ಶರಣಬಸಪ್ಪ ಗುಡಿಮನಿ, ಸ್ನೇಹಾ ವಿಜಯಕುಮಾರ ಹಿರೇಮಠ ದಂಪತಿಗಳನ್ನು, ವಿಶೇಷ ಚೇತನ ಮಗು ಹಾಗೂ ತಾಯಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಎಸ್.ಎಸ್. ಹುರಕಡ್ಲಿ ಮಾತನಾಡಿದರು. ಎಸ್.ಬಿ. ಬೇವಿನಮಟ್ಟಿ ಸ್ವಾಗತಿಸಿದರು. ಜಿ.ಎಂ. ದೇವಗಿರಿ ನಿರೂಪಿಸಿ ವಂದಿಸಿದರು.

## ಶರಣಬಸಪ್ಪ ಅಪ್ಪ ಆರೋಗ್ಯದಲ್ಲಿ ಏರುಪೇರು: ಆಸ್ಪತ್ರೆಗೆ ದಾಖಲು

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಕಲ್ಯಾಣ ಕರ್ನಾಟಕದಲ್ಲಿ ಶೈಕ್ಷಣಿಕ ಕ್ರಾಂತಿಗೆ ಹೆಸರಾಗಿರುವ ಶ್ರದ್ಧೆಯ ದಾರ್ಶನಿಕ ಮತ್ತು ಶಿಕ್ಷಣ ತಜ್ಞ ಡಾ. ಶರಣಬಸವಪ್ಪ ಅಪ್ಪ ಅವರ ಆರೋಗ್ಯದಲ್ಲಿ ಏರುಪೇರು ಉಂಟಾಗಿದ್ದು, ಅವರನ್ನು ಕಲಬುರಗಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಶರಣಬಸವೇಶ್ವರ ಸಂಸ್ಥಾನದ ಎಂಟನೆಯ ಪೀಠಾಧಿಪತಿಯಾಗಿ ಸೇವೆ ಸಲ್ಲಿಸುತ್ತಿರುವ 90 ವರ್ಷದ ಶರಣಬಸವಪ್ಪ ಅಪ್ಪ ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದು, ಪ್ರಸ್ತುತ ಖಾಸಗಿ ಆಸ್ಪತ್ರೆಯ ಐಸಿಯು ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಶರಣಬಸವೇಶ್ವರ ಸಂಸ್ಥಾನದ ಮೂಲಕ ದಾಸೋಹತತ್ವ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಅಪೂರ್ವ ಸೇವೆ ಸಲ್ಲಿಸಿರುವ ಶರಣಬಸವಪ್ಪ ಅಪ್ಪ ಅವರು ಲಕ್ಷಾಂತರ ವಿದ್ಯಾರ್ಥಿಗಳಿಗೆ ಶಿಕ್ಷಣದ ಬೆಳಕು ಹರಡಿದ ಮಹತ್ವದ ದಾರ್ಶನಿಕ ವ್ಯಕ್ತಿಯಾಗಿದ್ದಾರೆ.

ಅವರ ಆರೋಗ್ಯ ಸುಧಾರಣೆಗೆ ಭಕ್ತರು ಹಾಗೂ ಸಾರ್ವಜನಿಕರು ಪ್ರಾರ್ಥಿಸುತ್ತಿದ್ದಾರೆ.

### ಮುಸ್ಲಿಂ ಕುಟುಂಬದ ಮೇಲೆ ದಾಳಿ ಪ್ರಕರಣ; ಹೊಸ ಎಫ್‌ಐಆರ್‌ಗೆ ನ್ಯಾಯಾಲಯದ ಆದೇಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2020ರ ಈಶಾನ್ಯ ದೆಹಲಿ ಗಲಭೆಗಳ ಸಂದರ್ಭದಲ್ಲಿ ಮುಸ್ಲಿಂ ಕುಟುಂಬದ ಮೇಲೆ ನಡೆದ ಭೀಕರ ಮತ್ತು ಉದ್ದೇಶಿತ ದಾಳಿಗೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸುವಂತೆ ದೆಹಲಿ ನ್ಯಾಯಾಲಯವು ಪೊಲೀಸರಿಗೆ ನಿರ್ದೇಶಿಸಿದೆ.

ಈ ದಾಳಿಯಲ್ಲಿ ದ್ವೇಷ ಭಾಷಣ, ಪ್ರಚೋದನಕಾರಿ ಘೋಷಣೆಗಳು ಮತ್ತು ಮನೆಯ ಲೂಟಿ ಸೇರಿವೆ ಎಂದು ದೂರುದಾರ ರಹೀಸ್ ಅಹ್ಮದ್ ಆರೋಪಿಸಿದ್ದಾರೆ.

## ಯುವಕರು ಸಮಾಜ ಸಂಘಟನೆಯಲ್ಲಿ ತೊಡಗಿಸಿಕೊಳ್ಳಿ

▶▶ಮೊದಲನೇ ಪುಟದಿಂದ

ಖಜಾಂಚಿ ಎಂ.ಎಂ. ನಿಟ್ಟಾಲಿ, ಡಿ.ಎಸ್. ದುರ್ಗಣ್ಣವರ ಅವರುಗಳನ್ನು ಸನ್ಮಾನಿಸಲಾಯಿತು.

ಸಮಾಜದ ಯುವ ಮುಖಂಡರಾದ ಹೇಮಂತ ಗಿಡ್ಡಹನುಮಣ್ಣವರ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದ ರೂವಾರಿ ಹಾಗೂ ಕುರಿಗಾರರ ಸಹಕಾರಿ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಂಜುನಾಥ ಜಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗ ತಾಲೂಕಿನ ವಿವಿಧ ಗ್ರಾಮಗಳಿಂದ 25ಕ್ಕೂ ಹೆಚ್ಚು ಗ್ರಾಮ ಘಟಕದ ಪದಾಧಿಕಾರಿಗಳು, ಜಿಲ್ಲಾ ಯುವ ಕಾಂಗ್ರೆಸ್‌ನ ನೂತನ ಅಧ್ಯಕ್ಷ ಕೃಷ್ಣಗೌಡ ಪಾಟೀಲರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಮುತ್ತಣ್ಣ ಶಿವಳ್ಳಿ, ಯುವ ಬಳಗದ ನಿರ್ದೇಶಕ ರವಿ ವಗ್ಗನವರ, ಮಂಜುನಾಥ ಕುರಿ, ರಮೇಶ ಮಕಾಳಿ, ಪರುಶುರಾಮ ಜಡಿ, ರಮೇಶ ಹಂಡಿ, ಮಂಜುನಾಥ ನಾಗಾವಿ, ಮಹೇಶ ನೀಲಗುಂದ, ಬಸವರಾಜ ಶೇಲೆಯಪ್ಪನವರ, ಮಲ್ಲು ಇಂಗಳಳ್ಳಿ, ಲಕ್ಷ್ಮಣ ಜಂತ್ಲಿ, ವಿನಾಯಕ ಆಲೂರು, ರವಿ ಕೌವಡಕಿ, ಅಜ್ಜಪ್ಪ ಹೆಗ್ಗಣವರ, ರಾಜು ಕುರಿ, ರವಿ ಮಳವಾಡ, ರವಿ ಹದ್ಲಿ, ಬೀರೇಶ ಪೂಜಾರಿ, ಕಲ್ಮೇಶ ಹನುಮಣ್ಣವರ, ಮಂಜು ಪೂಜಾರಿ, ಸಚಿನ ಮೆಣಸಗಿ, ರಮೇಶ ಗೋಡಿ, ಸುನೀಲ್ ಜಡಿ, ಮಹೇಶ ಹುಡೇದ, ಕರಿಯಪ್ಪ ಗೌಡರ, ಗ್ರಾ.ಪಂ ಉಪಾಧ್ಯಕ್ಷ ಸಂತೋಷ ಮುತಾಳ, ರಫೀಕ್ ಮುಲ್ಲಾನವರ, ರಾಜು ಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

## ಒತ್ತಡ ನಿಗ್ರಹಕ್ಕೆ ಆಧ್ಯಾತ್ಮ, ಧ್ಯಾನ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ದಿನಗಳಲ್ಲಿ ಎಲ್ಲರೂ ಧಾವಂತ, ಒತ್ತಡದ ಬದುಕು ನಡೆಸುವಂತಾಗಿದೆ. ಆಧ್ಯಾತ್ಮ, ಯೋಗ, ಧ್ಯಾನಗಳಿಂದ ಒತ್ತಡಗಳನ್ನು ನಿಗ್ರಹಿಸಿಕೊಂಡು ನೆಮ್ಮದಿಯ ಜೀವನ ಸಾಗಿಸಲು ಸಾಧ್ಯವಿದೆ ಎಂದು ಗದಗ-ಅಡ್ನೂರ ದಾಸೋಹ ಮಠದ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ಗದುಗಿನ ನಂದೀಶ್ವರ ನಗರದ ಇಂಡೋರ್ ಸ್ಟೇಡಿಯಂ ಬಡಾವಣೆಯ ನಾಗರಿಕರ ವಿವಿಧೋದ್ದೇಶಗಳ ಸಂಘ ಏರ್ಪಡಿಸಿದ್ದ ಪಂಚವಟಿ ನಾಗರಕಟ್ಟೆಯ ನಾಗದೇವತಾ ಮೂರ್ತಿಯ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಎಲ್ಲರೂ ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು. ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಬೇಕು. ವಿಶೇಷವಾಗಿ, ಆಧ್ಯಾತ್ಮದ ಬಗ್ಗೆ ಒಲವು ಮೂಡುವಂತೆ ಮಾಡಬೇಕು. ಆಧ್ಯಾತ್ಮದ ತಳಹದಿಯ ಬದುಕು ನೆಮ್ಮದಿ ನೀಡಬಲ್ಲದು. ಅಂತಹ ಪ್ರಯತ್ನ ನಿಮ್ಮೆಲ್ಲರಿಂದ ಆರಂಭಗೊಳ್ಳಲಿ ಎಂದರು.

ನಾಗರಿಕರ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷ ವಿಶ್ವನಾಥ ಗದ್ದಿಕೇರಿ ಅಧ್ಯಕ್ಷತೆ ವಹಿಸಿದ್ದರು. ಸಂಘದ ಗೌರವ ಅಧ್ಯಕ್ಷ ಜಿ.ಎಸ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ರವೀಂದ್ರ ನಂದಿ ನಿರೂಪಿಸಿದರು, ಪ್ರಧಾನ ಕಾರ್ಯದರ್ಶಿ ಬಸವರಾಜ ಹೆಚ್.ಕೊರ್ಲಹಳ್ಳಿ ಸ್ವಾಗತಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶಿವಾನಂದ ಪಲ್ಲೇದ, ಮಹೇಶ್ ರಂಗಣ್ಣನವರ, ಜಗದೀಶ್ವರಯ್ಯ ಹಿರೇಮಠ ಡಾ. ಡಿ.ಬಿ. ಚನ್ನಶೆಟ್ರ, ರಾಚಯ್ಯ ಕರವೀರಮಠ, ಎಸ್.ವೈ. ಯಾಳಗಿಶೆಟ್ರು, ಬಸವರಾಜ ಬೇಲೇರಿ, ಮಂಜುನಾಥ ಗಜಕೊಶ, ಶ್ರೀನಿವಾಸ, ಬಸವಂತಪ್ಪ ಕವಲೂರ, ಹಬೀಬ, ಮಂಜುನಾಥ ಚಿಕ್ಕನಗೌಡ್ರು, ಸಿದ್ದರಾಮೇಶ ಹಿರೇಮಠ, ಅನಿಲ ಗೌಳಿ, ಸುಭಾಸ ಗಡಾದ, ಶಿವಕುಮಾರ ರಾಠೋಡ, ಹೊಳೆಯಪ್ಪಗೌಡ ಪಾಟೀಲ, ನಿಂಗರಾಜ ಗೊಲ್ಲರ, ಸಿದ್ದರಾಮೇಶ ಹಿರೇಮಠ, ನೀಲಕಂಠಯ್ಯ ಕಳ್ಳಿಮಠ, ವಿ.ಎಸ್. ಶಿವಕಾಳಿಮಠ ಮುಂತಾದವರಿದ್ದರು.

## ಗುಮ್ಲಾದಲ್ಲಿ ಮೂವರು ನಕ್ಸಲರು ಹತ; ಭದ್ರತಾ ಪಡೆಗಳ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಾರ್ಖಂಡ್‌ನ ಗುಮ್ಲಾ ಜಿಲ್ಲೆಯಲ್ಲಿ ಶನಿವಾರ ಮುಂಜಾನೆ ನಡೆದ ಭೀಕರ ಗುಂಡಿನ ಚಕಮಕಿಯಲ್ಲಿ ಮೂವರು ನಕ್ಸಲರು ಹತರಾಗಿದ್ದು, ಭದ್ರತಾ ಪಡೆಗಳು ನಕ್ಸಲ್ ನಿಗ್ರಹ ಕಾರ್ಯಾಚರಣೆಯಲ್ಲಿ ಮಹತ್ವದ ಯಶಸ್ಸು ಗಳಿಸಿವೆ ಎಂದು ಪೊಲೀಸರು ತಿಳಿಸಿದ್ದಾರೆ. ನಕ್ಸಲರ ಚಟುವಟಿಕೆಗಳಿಗೆ ಕುಖ್ಯಾತವಾಗಿರುವ ಘಾಘ್ರಾ ಪ್ರದೇಶದಲ್ಲಿ ಈ ಎನ್‌ಕೌಂಟರ್ ನಡೆದಿದೆ.

ಪೊಲೀಸ್ ಮೂಲಗಳ ಪ್ರಕಾರ, ಹತ್ಯೆಗೀಡಾದ ಉಗ್ರರು ನಿಷೇಧಿತ ಸಿಪಿಐ (ಮಾವೋವಾದಿ) ಯಿಂದ ಬೇರ್ಪಟ್ಟ ಗುಂಪಾದ ಜಾರ್ಖಂಡ್ ಜನ ಮುಕ್ತಿ ಪರಿಷದ್ (ಜೆಜೆಎಂಪಿ)ನ ಸದಸ್ಯರಾಗಿದ್ದರು.

ಜಾರ್ಖಂಡ್ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ (ಆಪರೇಷನ್ಸ್) ಮೈಕೆಲ್ ಎಸ್ ರಾಜ್ ಅವರು ಕಾರ್ಯಾಚರಣೆ ಇನ್ನೂ ಮುಂದುವರಿದಿದೆ ಎಂದು ದೃಢಪಡಿಸಿದ್ದು, ಶೋಧ ಕಾರ್ಯಾಚರಣೆಗಳು ಪೂರ್ಣಗೊಂಡ ನಂತರ ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸುವುದಾಗಿ ತಿಳಿಸಿದ್ದಾರೆ.

# ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಜು.30ರಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಈ ವರ್ಷ ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಪ್ರಾರಂಭೋತ್ಸವ ಜುಲೈ 30ರಂದು ಶ್ರೀ ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳಿಂದ ಶುಭಾರಂಭಗೊಳ್ಳಲಿದೆ ಎಂದು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ ಹೇಳಿದರು.




ಅವರು ಶನಿವಾರ ಈ ಕುರಿತು ಮಾಹಿತಿ ನೀಡಿ, ಪ್ರತಿವರ್ಷ ಶ್ರಾವಣ ಮಾಸದಲ್ಲಿ ಪುರಾಣ ಕಾರ್ಯಕ್ರಮಗಳನ್ನು ಕಳೆದ 15 ವರ್ಷಗಳಿಂದ ನಡೆಸಿಕೊಂಡು ಬರಲಾಗುತ್ತಿದೆ. ಪ್ರಾರಂಭೋತ್ಸವ ದಿನ ಪಟ್ಟಣದ ಕೆಇಬಿಯ ಗಣೇಶ ದೇವಸ್ಥಾನದಿಂದ ಶೃಂಗರಿಸಿದ ಎತ್ತಿನ ಬಂಡಿಯಲ್ಲಿ ಭಜನೆ, ವಾದ್ಯ ಮೇಳದೊಂದಿಗೆ ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಗ್ರಂಥದ ಮೆರವಣಿಗೆ ಪ್ರಮುಖ ಮಾರ್ಗದ ಮೂಲಕ ಸೋಮೇಶ್ವರ ದೇವಸ್ಥಾನದಲ್ಲಿ ಸಂಪನ್ನಗೊಳ್ಳಲಿದೆ. ಸಂಜೆ 7.30ಕ್ಕೆ ಪುರಾಣ ಪ್ರಾರಂಭೋತ್ಸವ ಕಾರ್ಯಕ್ರಮ ಜರುಗಲಿದೆ.

ದೇವಸ್ಥಾನ ಕಮಿಟಿಯ ಖಜಾಂಚಿ, ವರ್ತಕರಾದ ಬಸವೇಶ ಮಹಾಂತಶೆಟ್ಟರ ಉದ್ಘಾಟಿಸುವರು. ಅತಿಥಿಗಳಾಗಿ ಉದ್ಯಮಿ ಲೋಹಿತ ನೆಲವಿಗಿ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ, ಅರ್ಚಕ ಕೃಷ್ಣಾಜಿ ಪೂಜಾರ ಉಪಸ್ಥಿತರಿರುವರು. ಗದುಗಿನ ಗಾನಯೋಗಿ ಲಿಂ. ಡಾ. ಪಂಡಿತ ಪುಟ್ಟರಾಜ ಗವಾಯಿಗಳವರ ಶಿಷ್ಯ, ಜಲ್ಲಾಪುರದ ಗುರು ಶಾಂತಯ್ಯ ಶಾಸ್ತ್ರಿಗಳು ಆರಾಧ್ಯಮಠ ಪುರಾಣ ಪಠಣ/ಪ್ರವಚನವೈವರು. ಧಾರವಾಡದ ವಿಜಯಕುಮಾರ ಸುತಾರ ತಬಲಾ ಸಾಥ್ ನೀಡುವರು. ಆ.24ರವರೆಗೆ ನಡೆಯುವ ಶ್ರೀ ಸಿದ್ಧಾರೂಢರ ಪುರಾಣ ಪ್ರವಚನದಲ್ಲಿ ಪಟ್ಟಣದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ವೇಳೆ ಬಸವೇಶ ಮಹಾಂತಶೆಟ್ಟರ, ಗೋಪಾಲ ಫಡ್ನಿಸ್, ಪೂರ್ಣಾಜಿ ಖರಾಟೆ, ಸುರೇಶ ರಾಚನಾಯಕರ, ಶಂಕರ ಬಾಳಿಕಾಯಿ, ಮಯೂರಗೌಡ ಪಾಟೀಲ, ಜಿ.ಎಸ್. ಗುಡಗೇರಿ, ವಿರೂಪಾಕ್ಷ ಆದಿ, ಎನ್.ಆರ್. ಸಾತಪುತೆ, ಬಸವರಾಜ ಮೆಣಸಿನಕಾಯಿ ಸೇರಿ ಶ್ರೀ ಸೋಮೇಶ್ವರ ಪುರಾಣ ಸಮಿತಿ ಸದಸ್ಯರು ಇದ್ದರು.

## ಮಾಧ್ಯಮಗಳ ನಿರ್ಬಂಧ ಪ್ರಶ್ನಿಸಿದ ಹೈಕೋರ್ಟ್; ಆದೇಶದ ಸಿಂಧುತ್ವದ ಬಗ್ಗೆ ಗಂಭೀರ ಪ್ರಶ್ನೆಗಳು



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತು ಹಾಕಲಾಗಿದೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ, ಆ ಕ್ಷೇತ್ರದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರ ಸಹೋದರ ಹರ್ಷೇಂದ್ರ ಕುಮಾರ್ ಡಿ ಅವರ ವಿರುದ್ಧ ಯಾವುದೇ ಮಾನಹಾನಿ ವಿಷಯವನ್ನು ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ವಿಧಿಸಲಾಗಿದ್ದ ನಿರ್ಬಂಧದ ಆದೇಶವನ್ನು ಕರ್ನಾಟಕ ಹೈಕೋರ್ಟ್ ತೀವ್ರವಾಗಿ ಪ್ರಶ್ನಿಸಿದೆ. ಈ ಆದೇಶದ ಸಿಂಧುತ್ವ ಮತ್ತು ಮಾಧ್ಯಮ ಸ್ವಾತಂತ್ರ್ಯದ ಮೇಲಿನ ಪರಿಣಾಮಗಳ ಕುರಿತು ಗಂಭೀರ ಚರ್ಚೆಗೆ ಇದು ಕಾರಣವಾಗಿದೆ.

ಮಾಧ್ಯಮಗಳಿಗೆ ವಿಧಿಸಲಾಗಿದ್ದ ಈ ನಿರ್ಬಂಧದ ಆದೇಶವನ್ನು ಪ್ರಶ್ನಿಸಿ ಡಿಜಿಟಲ್ ಮಾಧ್ಯಮ ಸಂಸ್ಥೆ ಕುಡ್ಲ ರ್‍ಯಾಂಪೇಜ್‌ನ ಪ್ರಧಾನ ಸಂಪಾದಕ ಅಜಯ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು. ವಿಚಾರಣೆ ವೇಳೆ, ನ್ಯಾಯಪೀಠವು ಹರ್ಷೇಂದ್ರ ಕುಮಾರ್ ಪರ ವಕೀಲರನ್ನು ತರಾಟೆಗೆ ತೆಗೆದುಕೊಂಡು, "ನಿರ್ಲಜ್ಜವಾಗಿ ಎಲ್ಲರನ್ನು ನಿರ್ಬಂಧಿಸುವ ಇದೆಂಥಾ ಆದೇಶ?" ಎಂದು ನೇರವಾಗಿ ಪ್ರಶ್ನಿಸಿತು. ಈ ನ್ಯಾಯಾಲಯವು ಆದೇಶದ ವ್ಯಾಪ್ತಿ ಮತ್ತು ಮಾಧ್ಯಮಗಳ ಮೇಲಿನ ಅದರ ಅಗಾಧ ಪರಿಣಾಮದ ಬಗ್ಗೆ ಆಳವಾದ ಕಳವಳವನ್ನು ವ್ಯಕ್ತಪಡಿಸಿತು.

### ಬಿಜೆಪಿ ಹಮ್ಮಿಕೊಂಡಿದ್ದ 'ಕಾರ್ಗಿಲ್ ವಿಜಯ ದಿವಸ' ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ವೀರ ಯೋಧರನ್ನು ಸದಾ ಸ್ಮರಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರರನ್ನು ಕಾರ್ಗಿಲ್ ವಿಜಯ ದಿನದಂದು ಸ್ಮರಣೆ ಮಾಡುವದು ಅವಶ್ಯವಾಗಿದೆ. ಕಾರ್ಗಿಲ್ ವಿಜಯೋತ್ಸವ ಈ ದೇಶದ ಸೈನಿಕರ ಸಾಹಸದ ಪ್ರತೀಕವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪಟ್ಟಣದಲ್ಲಿ ಬಿಜೆಪಿ ಪಕ್ಷದಿಂದ ಕಾರ್ಗಿಲ್ ವಿಜಯ ದಿವಸದ ನಿಮಿತ್ತ ಭಾರತಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾಜಿ ಸೈನಿಕರನ್ನು ಸನ್ಮಾನಿಸಿ ಮಾತನಾಡಿದರು.

ಕಾರ್ಗಿಲ್ ಯುದ್ಧದಲ್ಲಿ ಭಾರತೀಯ ಸೈನಿಕರು ಕೆಚ್ಚೆದೆಯಿಂದ ಹೋರಾಡಿ ನಮ್ಮ ದೇಶದ ಘನತೆ, ಸಾಹಸವನ್ನು ಎತ್ತಿ ಹಿಡಿದಿದ್ದರು. ಯುದ್ಧದಲ್ಲಿ ಭಾರತ ತನ್ನ ಸಾರ್ವಭೌಮತೆ ಮತ್ತು ಸಮಗ್ರತೆಯನ್ನು ರಕ್ಷಿಸಲು ಬಲಿಷ್ಠವಾಗಿದೆ ಎಂಬ ಸಂದೇಶವನ್ನು ಜಗತ್ತಿಗೆ ತೋರಿಸಿತ್ತು. ಹೀಗಾಗಿ ಪ್ರತಿವರ್ಷ ಜುಲೈ 26ರಂದು ಕಾರ್ಗಿಲ್ ವಿಜಯ ದಿನವನ್ನು ಆಚರಿಸಲಾಗುತ್ತಿದೆ. ಇವರ ತ್ಯಾಗ, ಬಲಿದಾನ, ದೇಶಪ್ರೇಮ ಖಂಡಿತಾ ಎಲ್ಲಾ ಭಾರತೀಯರಿಗೂ ಸ್ಫೂರ್ತಿಯ ದಾರಿದೀಪ. ಸೈನಿಕರನ್ನು ದೇಶದ ಪ್ರತಿಯೊಬ್ಬರೂ ಸ್ಮರಿಸಿಕೊಳ್ಳಬೇಕು. ತಾಯಿ ನೆಲ ಸಂಕಷ್ಟದಲ್ಲಿದ್ದಾಗ ಸಾವಿಗೂ ಅಂಜದೆ ಹೋರಾಡಿದ ಯೋಧರನ್ನು ಸ್ಮರಿಸೋಣ. ದೇಶಕ್ಕಾಗಿ ಪ್ರಾಣಾರ್ಪಣೆಗೈದ ಕೆಚ್ಚೆದೆಯ ವೀರರ ತ್ಯಾಗ ಎಂದಿಗೂ ಅಮರ ಎಂದರು.

ಸನ್ಮಾನ ಸ್ವೀಕರಿಸಿದ ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಿ.ಎಸ್. ಹಿರೇಮಠ ಮಾತನಾಡಿ, ಯೋಧರು ತಮ್ಮ ಸರ್ವಸ್ವವನ್ನು ತ್ಯಾಗ ಮಾಡಿರುತ್ತಾರೆ. ಯೋಧರ ತ್ಯಾಗ, ಬಲಿದಾನದ ಬಗ್ಗೆ ನಾಗರಿಕರಿಗೆ ತಿಳಿಸುವ ಕೆಲಸ ಆಗಬೇಕಿದೆ. ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಿಗೆ ದೇಶಭಕ್ತಿಯನ್ನು ಬೆಳೆಸುವ ಕಾರ್ಯವಾಗಬೇಕು ಎಂದು ಹೇಳಿದರು.

ಹಿರಿಯ ಮುಖಂಡ ಪೂರ್ಣಾಜಿ ಕರಾಟೆ ಮಾತನಾಡಿ, ನೆಲ-ಜಲ ಕಾಯುವ ಕೆಲಸವನ್ನು ಯೋಧರು ಮಾಡುತ್ತಾರೆ. ಅಂತಹ ವೀರ ಯೋಧರನ್ನು ಎಲ್ಲರೂ ನೆನೆಯಬೇಕು ಎಂದರು.

ಈ ವೇಳೆ ಎನ್.ಎನ್. ನೆಗಳೂರ, ಎನ್.ಆರ್. ಸಾತಪುತೆ, ಶಿರಹಟ್ಟಿ ಬಿಜೆಪಿ ಮಂಡಳದ ಪ್ರ. ಕಾರ್ಯದರ್ಶಿ ಅನಿಲ ಮುಳಗುಂದ, ನೀಲಪ್ಪ ಹತ್ತಿ, ದುಂಡೇಶ ಕೊಟಗಿ, ಗಂಗಾಧರ ಮೆಣಸಿನಕಾಯಿ, ಶಕ್ತಿ ಕತ್ತಿ, ವಿಜಯ ಕುಂಬಾರ, ಮಂಜುನಾಥ ಗದಗ, ಪ್ರವೀಣ ಬೋಮಲೆ, ನವೀನ ಹಿರೇಮಠ, ಕಲ್ಲಪ್ಪ ಹಡಪದ, ಬಸವರಾಜ ಕುಂಬಾರ, ವಿಜಯ ಮೆಕ್ಕಿ, ಭೀಮಣ್ಣ ಯಂಗಾಡಿ, ಜಗದೀಶಗೌಡ ಪಾಟೀಲ, ಪರಶುರಾಮ ಇಮ್ಮಡಿ, ಸಂಜೀವ ದೇಸಾಯಿ, ತುಕ್ಕಪ್ಪ ಪೂಜಾರ ಮುಂತಾದವರಿದ್ದರು.



ಯೋಧರೆಂದರೆ ಅವರು ಬರೀ ವ್ಯಕ್ತಿಗಳಲ್ಲ. ಅವರು ಶಕ್ತಿ, ನಮ್ಮ ಹೆಮ್ಮೆ, ಸೇನೆಯ ಕೀರ್ತಿ. ಈ ವೀರರಿಂದಾಗಿ ಭಾರತ ಎಂದೆಂದಿಗೂ ಸುರಕ್ಷಿತ. ನಮ್ಮ ದೇಶದ ಸಮಗ್ರತೆಗೆ, ಗೌರವ, ಸುರಕ್ಷತೆಯ ವಿಷಯದಲ್ಲಿ ಎಲ್ಲರೂ ಒಟ್ಟಾಗಿ ನಿಲ್ಲಬೇಕು. ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರು ಭಾರತಿಯ ಸೈನ್ಯಕ್ಕೆ ಬಲ ತುಂಬುವ ಕಾರ್ಯ ಮಾಡಿದ್ದಾರೆ ಎಂದ ಶಾಸಕ ಡಾ. ಚಂದ್ರು ಲಮಾಣಿ, ವೀರಯೋಧರನ್ನು ಪ್ರತಿಯೊಬ್ಬ ಭಾರತೀಯರೂ ಸ್ಮರಣೆ ಮಾಡಬೇಕೆಂದು ಹೇಳಿದರು.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮ

# ಕ್ರೀಡಾಕೂಟಕ್ಕೆ ಅಧಿಕೃತ ಚಾಲನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ಸುವರ್ಣ ಮಹೋತ್ಸವದ ಸಂಭ್ರಮದ ಅಂಗವಾಗಿ ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ 'ಗದಗ ಉತ್ಸವ–2025'ನ್ನು ಆಗಸ್ಟ್ 15ರಿಂದ 19ರವರೆಗೆ ಕೆ.ಎಚ್. ಪಾಟೀಲ ಸಭಾ ಭವನ ಹಾಗೂ ಶ್ರೀ ಸ್ವಾಮಿ ವಿವೇಕಾನಂದ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಸಂಭ್ರಮದ ನಿಮಿತ್ತ ಸಂಸ್ಥೆಯ ಸದಸ್ಯರಿಗೆ ವಿವಿಧ ಕ್ರೀಡಾ ಕೂಟವನ್ನು ಜುಲೈ 27ರಂದು ಪ್ರಾರಂಭಗೊಳ್ಳಲಿದೆ. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಕೇರಂ ಟೋರ್ನಾಮೆಂಟ್ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಾ. ಶ್ರೀಧರ ಕುರಡಗಿ, ಡಾ. ಸುನೀತಾ ಕುರಡಗಿ, ಶೂಟಿಂಗ್ ಕ್ರೀಡಾಪಟು ಮಾನ್ವಿತಾ ಮುರುಘರಾಜೇಂದ್ರ ಬಡ್ನಿ ಪಾಲ್ಗೊಳ್ಳುವರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ವಹಿಸುವರು. ಸಂಸ್ಥೆಯ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಸಂಸ್ಥೆಯ ಕ್ರೀಡಾ ಉಪ ಸಮಿತಿ ಚೇರಮನ್ ಶರಣು ವ್ಹಿ.ಗದಗ, ಕೋ–ಚೇರಮನ್ ಪ್ರಮೋದ ಆರ್.ವಾರಕರ, ಕ್ರೀಡಾ ಸಮಿತಿ ಸದಸ್ಯರಾದ ಧೀರಜ ಜೈನ್, ತಿಮ್ಮಣ್ಣ ಕೋನರಡ್ಡಿ, ರಾಜು ಮುಧೋಳ, ರಾಜಣ್ಣಾ ಮಲ್ಲಾಡದ, ವಿನೋದ ಉಮಚಗಿ, ನಿತೀಶ ವಾಲಿ, ವಿಕಾಸ ಜೈನ್, ಕೊಟ್ರೇಶ ಬಾಳಿಕಾಯಿ, ವಿನಾಯಕ ವಸ್ತ್ರೇಶ್ವರಿ, ರಮೇಶ ಶಿಗ್ಲಿ, ಸುವರ್ಣ ಎಸ್.ಮದರಿಮಠ, ಜಯಶ್ರೀ ತಾತನಗೌಡ ಪಾಟೀಲ, ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ, ವಿಜಯಕುಮಾರ ಎಸ್.ಮಾಟಲದಿನ್ನಿ, ಎಸ್.ಆರ್. ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿಗಳಾದ ಸೋಮನಾಥ ಕೆಜಾಲಿ, ರಾಘವೇಂದ್ರ ಎಸ್.ಕಾಲವಾಡ, ಕೋಶಾಧ್ಯಕ್ಷ ಸಂಜಯ ಬಾಗಮಾರ ಸ್ವಾಗತಿಸಿದ್ದಾರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಗಳ ಕೃಪೆಯಿಂದ ಶಿಕ್ಷಣ ಸಂಸ್ಥೆಯ ಪ್ರಗತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾಲಕೆರೆಯ ಅನ್ನದಾನ ಸ್ವಾಮೀಜಿ ನಾಲ್ಕನೇ ತರಗತಿ ಓದಿದ್ದು, ಅವರಲ್ಲಿನ ಶಿಕ್ಷಣ ಪ್ರೇಮದಿಂದ ವಿಶ್ವ ವಿದ್ಯಾಲಯದ ಸ್ಥಾಪನೆಯ ಉತ್ಕೃಷ್ಟ ಚಿಂತನೆ ಹೊಂದಿದ್ದರು ಎಂದು ಉಪನ್ಯಾಸಕ ಎಫ್.ಎನ್. ಹುಡೇದ ಹೇಳಿದರು.

ಪಟ್ಟಣದ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ಶನಿವಾರ 2025–26ನೇ ಸಾಲಿನ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಶಾಲಾ ಸಂಸ್ಥಾಪಕರ ದಿನಾಚರಣೆ, ಶಾಲಾ ಸಂಸತ್ ಸದಸ್ಯರ ಪ್ರಮಾಣ ವಚನ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೂಜ್ಯರ ತಪಃಶಕ್ತಿ, ಇಚ್ಛಾಶಕ್ತಿ, ಕಾಯಕ ಶಕ್ತಿಗಳಿಂದ ಆರಂಭಗೊಂಡ ಹಲವು ಸಂಸ್ಥೆಗಳಲ್ಲಿ ಒಂದಾಗಿರುವ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆ ಮಾದರಿ ವಿದ್ಯಾಸಂಸ್ಥೆಯಾಗಿದೆ. ಸುವರ್ಣ ಮಹೋತ್ಸವದ ಸಂಭ್ರಮದಲ್ಲಿರುವ ಶಾಲೆಯು ಸಂಸ್ಥಾಪಕರ ದಿನದ ಆಚರಣೆ ಮಾಡುತ್ತಿರುವದು ಶ್ಲಾಘನೀಯ ಎಂದರು.



ಕಾರ್ಯಕ್ರಮವನ್ನು ಶಾಲೆಯ ಆಡಳಿತ ಮಂಡಳಿ ಚೇರಮನ್ ವೀರಣ್ಣ ಹಳ್ಳಿ ಉದ್ಘಾಟಿಸಿರು. 2025ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ರಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು. ನೂತನವಾಗಿ ಆಯ್ಕೆಯಾದ ಶಾಲಾ ಸಂಸತ್ತಿನ ಪದಾಧಿಕಾರಿಗಳಿಗೆ ಶಿಕ್ಷಕ ಎಸ್.ಶಿವಮೂರ್ತಿ ಪ್ರಮಾಣ ವಚನ ಬೋಧಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಆಡಳಿತ ಮಂಡಳಿ ಸದಸ್ಯರಾದ ನಿಂಗನಗೌಡ ಲಕ್ಕನಗೌಡರ, ಮಲ್ಲಿಕಾರ್ಜುನಪ್ಪ ಮೆಣಸಗಿ ಪಾಲಕರಾದ ಅಂದಾನಪ್ಪ ಬೂದಿಹಾಳ, ಶಿಕ್ಷಕರಾದ ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ, ಅರುಣಕುಮಾರ, ಎಸ್.ಎಫ್. ಧರ್ಮಾಯತ, ಆರ್.ಎಂ. ಗುಳಬಾಳ, ಗೀತಾ ಭೋಪಳಾಪುರ, ಪ್ರಶಿಕ್ಷಣಾರ್ಥಿ ದೀಪಾ ರಡ್ಡೇರ, ಜ್ಯೋತಿ ಪೂಜಾರ, ಶಾಲಾ ಸಿಬ್ಬಂದಿಯಾದ ವೀರೇಶ ಚುಳಕಿ, ಸಂಗಮೇಶ ಕುರಡಗಿ ಉಪಸ್ಥಿತರಿದ್ದರು. ಮುಖ್ಯೋಪಾಧ್ಯಾಯ ಎಸ್ಎನ್. ಹೂಲಗೇರಿ ಸ್ವಾಗತಿಸಿದರು, ವಿದ್ಯಾರ್ಥಿ ಪ್ರಿಯಾ ಹೊನ್ನಪ್ಪಗೌಡರ ಹಾಗೂ ಗೋದಾವರಿ ಕಮ್ಮಾರ ನಿರೂಪಿಸಿದರು. ಎ.ಟಿ. ಮಳ್ಳಳ್ಳಿ ವಂದಿಸಿದರು.

# ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ಛಲವಿರಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪದವಿಪೂರ್ವ ಎನ್ನುವದು ವಿದ್ಯಾರ್ಜನೆಯ ಮಹತ್ವಪೂರ್ಣ ಘಟ್ಟವಾಗಿದ್ದು, ಇದರಲ್ಲಿ ವಿದ್ಯಾರ್ಥಿಗಳು ಹೆಚ್ಚು ವಿದ್ಯಾರ್ಜನೆಗೆ ಆದ್ಯತೆ ನೀಡಬೇಕು. ಪಟ್ಟಣದ ಸಾವಿರಾರು ಜನರಿಗೆ ವಿದ್ಯೆ ನೀಡಿದ ಕೀರ್ತಿ ಹೊಂದಿರುವ ಪುರಸಭೆ ಕಾಲೇಜಿನಲ್ಲಿ ಪ್ರವೇಶ ಪಡೆದಿರುವದಕ್ಕೆ ಎಲ್ಲ ವಿದ್ಯಾರ್ಥಿಗಳನ್ನು ಅಭಿನಂದಿಸುವದಾಗಿ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ ಹೇಳಿದರು. ಅವರು ಪಟ್ಟಣದ ಪುರಸಭೆ ಪದವಿಪೂರ್ವ ಮಹಾವಿದ್ಯಾಲಯದಲ್ಲಿ 2025–26ನೇ ಸಾಲಿನ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಜೀವನದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ಛಲ ನಿಮ್ಮಲ್ಲಿ ಬರಬೇಕು. ಎಲ್ಲವನ್ನು ಎದುರಿಸಿ ಸಾಧನೆ ಮಾಡುವ ಗುಣ ಬೆಳೆದುಬಂದಲ್ಲಿ ಎಲ್ಲ ಹಾದಿಗಳು ನಿಮಗೆ ಸುಗಮವಾಗುವವು. ಯಾವುದೇ ಕಾರಣಕ್ಕೂ ಎದೆಗುಂದದೆ ಧೈರ್ಯದಿಂದ ಎದುರಿಸು ಛಲ ಇದ್ದಲ್ಲಿ ಸಾಧನೆ ಅಸಾಧ್ಯವೇನಲ್ಲ. ವಿದ್ಯಾರ್ಜನೆಗೆ ಬಂದಿರುವ ನಿಮಗೆ ನಿಮ್ಮ ಆಯ್ಕೆಯ ಬಗ್ಗೆ ಸಂಪೂರ್ಣ ಜ್ಞಾನ ಇರುತ್ತದೆ. ಪುರಸಭೆ ಪ.ಪೂ ಕಾಲೇಜು ಸುಮಾರು 75 ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿದ್ದು, ಇಲ್ಲಿ ಕಲಿತ ಅನೇಕರು ದೇಶ ವಿದೇಶಗಳಲ್ಲಿ ತಮ್ಮ ಸಾಮರ್ಥ್ಯವನ್ನು ತೋರಿದ್ದಾರೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪುರಸಭೆ ಉಪಾಧ್ಯಕ್ಷ ಪೀರದೋಷ ಆಡೂರ, ಸದಸ್ಯೆ ಜಯಕ್ಕ ಅಂದಲಗಿ ಮಾತನಾಡಿದರು. ವೇದಿಕೆಯಲ್ಲಿ ಸದಸ್ಯೆ ಮಂಜುಳಾ ಗುಂಜಳ, ಪ್ರಾಚಾರ್ಯ ಅಶೋಕ ಕಳ್ಳಿಮನಿ, ಉಪನ್ಯಾಸಕರಾದ ಎಸ್.ಜಿ. ಹುಳಕನವರ, ಮಂಜುನಾಥ ಬೂದಿಹಾಳ, ಎಚ್.ಎಲ್. ಕೋರಿ, ಎಂ.ಎಲ್. ಬೋದ್ಲೆಖಾನ್, ಎಫ್.ಎಂ. ಚಕಾರದ, ಶಿಲ್ಪಾ ಮುದಗಲ್, ಪಿ.ಡಿ. ದೇಶಪಾಂಡೆ, ವಿದ್ಯಾ ಬಾಲೇಹೊಸೂರು, ಶಾರದಾ ಉಕ್ಕಲಿ, ಎಂ.ಎಸ್. ಮಳಗಿ, ಡಿ.ಎಂ. ಪೂಜಾರ, ಬಿ.ಜೆ. ಪಾಟೀಲ, ಬನ್ನಿಕೊಪ್ಪ ಮುಂತಾದವರಿದ್ದರು. ಇದೇ ಸಂದರ್ಭದಲ್ಲಿ 2024–25ರ ದ್ವಿತಿಯ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

# ಕಾರ್ಗಿಲ್ ವಿಜಯೋತ್ಸವ ರ್‍ಯಾಲಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಮಾಜಿ ಸೈನಿಕರ ಹಾಗೂ ಪ್ಯಾರಾ ಮಿಲಟರಿ ಯೋಧರ ಕಲ್ಯಾಣ ಸಂಘದ ವತಿಯಿಂದ ಶನಿವಾರ 26ನೇ ಕಾರ್ಗಿಲ್ ವಿಜಯೋತ್ಸವ ರ್‍ಯಾಲಿ ಜರುಗಿತು.

ಕಾರ್ಗಿಲ್ ವಿಜಯೋತ್ಸವ ರ್‍ಯಾಲಿಯು ಪಟ್ಟಣದ ಹಳೆ ಬಸ್ ನಿಲ್ದಾಣ, ಡಾ. ಬಿ.ಆರ್. ಅಂಬೇಡ್ಕರ ನಗರ, ದರ್ಗಾ ಓಣಿ, ವೀರಣ್ಣನ ಪಾದ, ಗಣೇಶ ದೇವಸ್ಥಾನ, ಮಾಜಿ ಗೌಡ್ರ ಪ್ರೆಸ್, ಪಟ್ಟಣ ಪಂಚಾಯಿತಿ ಮುಂಭಾಗ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹೊಸ ಬಸ್ ನಿಲ್ದಾಣದಿಂದ ಗಾಂಧಿ ಭವನದಲ್ಲಿರುವ ಮಾಜಿ ಸೈನಿಕ ಕಛೇರಿಯವರೆಗೆ ಜರುಗಿತು. ರ್‍ಯಾಲಿಯಲ್ಲಿ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ವೀರ ಯೋಧರಿಗೆ ನಮನ ಸಲ್ಲಿಸಲಾಯಿತು.

ರ್‍ಯಾಲಿಯಲ್ಲಿ ಪಟ್ಟಣದ ಮಾಜಿ ಸೈನಿಕರು ಹಾಗೂ ಪ್ಯಾರಾ ಮಿಲಿಟರಿ ಯೋಧರ ಕಲ್ಯಾಣ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

# ಕೋರ್ಟ್ ಆದೇಶಕ್ಕೆ ಗೌರವ, ಸತ್ಯಕ್ಕೆ ಬದ್ಧ: ಧರ್ಮಸ್ಥಳ ಪ್ರಕರಣದಲ್ಲಿ ಡಿಜಿಟಲ್ ಮಾಧ್ಯಮಗಳ ದಿಟ್ಟ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸೌಜನ್ಯಾ ಅತ್ಯಾಚಾರ ಮತ್ತು ಹತ್ಯೆ ಪ್ರಕರಣ ಹಾಗೂ ಧರ್ಮಸ್ಥಳದ ಸುತ್ತಮುತ್ತ ನಡೆದಿದೆ ಎನ್ನಲಾದ ಸರಣಿ ಕೊಲೆಗಳ ವರದಿ ಮಾಡುವ ವಿಚಾರದಲ್ಲಿ ನ್ಯಾಯಾಲಯಗಳ ಆದೇಶವನ್ನು ಪಾಲಿಸುವುದರ ಜೊತೆಗೆ, ಸತ್ಯ ಸುದ್ದಿಯ ಪ್ರಸಾರವನ್ನು ಮುಂದುವರಿಸಲು ಡಿಜಿಟಲ್ ಮಾಧ್ಯಮಗಳು ಮತ್ತು ಯೂಟ್ಯೂಬರ್‌ಗಳು ಒಮ್ಮತದ ನಿರ್ಣಯ ತೆಗೆದುಕೊಂಡಿವೆ. ನ್ಯಾಯಾಂಗದ ಪ್ರಕ್ರಿಯೆಯನ್ನು ಗೌರವಿಸುತ್ತಲೇ, ಪತ್ರಿಕಾ ಸ್ವಾತಂತ್ರ್ಯ ಮತ್ತು ಸಾರ್ವಜನಿಕ ಹಿತಾಸಕ್ತಿಯ ರಕ್ಷಣೆಗೆ ಬದ್ಧವಾಗಿರುವುದಾಗಿ ಅವರು ಘೋಷಿಸಿದ್ದಾರೆ.

### 'ಶರಣ ಚರಿತಾಮೃತ' ಪ್ರವಚನ ಕಾರ್ಯಕ್ರಮ ಉದ್ಘಾಟಿಸಿದ ಶ್ರೀ ಪಕ್ಕೀರೇಶ್ವರ ಶಿವಚಾರ್ಯರು

# ಗದಗ ಜ್ಞಾನದ ಗದ್ದುಗೆಯಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಶರಣರು ತಮ್ಮ ಅನುಭವಗಳನ್ನು ವಚನದ ರೂಪದಲ್ಲಿ ಸಮಾಜಕ್ಕೆ ಕೊಟ್ಟಿದ್ದು, ಅವುಗಳು ಜಾತಿ, ಮತ ಭೇದವನ್ನು ಬಿಟ್ಟು ಕಟ್ಟಿದ ಅನುಭವಗಳು. ಶ್ರಾವಣ ಮಾಸ ಅಂದರೆ ಒಳ್ಳೆಯದನ್ನು ಕೇಳುವುದು. ಶರಣರ ಅನುಭವಗಳನ್ನು ಕೇಳಿ ನಮ್ಮ ಜೀವನ ಪಾವನಗೊಳಿಸಬೇಕು. ಒಳ್ಳೆಯದನ್ನು ಕೇಳಿ ಅದರಂತೆ ನಡೆದುಕೊಳ್ಳಬೇಕು ಎಂದು ಷ.ಬ್ರ. ಶ್ರೀ ಪಕ್ಕೀರೇಶ್ವರ ಶಿವಚಾರ್ಯರು ನುಡಿದರು.

ನಗರದ ಇತಿಹಾಸ ಪ್ರಸಿದ್ಧ ಒಕ್ಕಲಗೇರಿ ಓಣಿ ಶ್ರೀ ರಾಯಚೋಟಿ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಶ್ರಾವಣ ಮಾಸದ ನಿಮಿತ್ತ ಆರಂಭಗೊಂಡ 'ಶರಣ ಚರಿತಾಮೃತ' ಪ್ರವಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪ್ರವಚನಕಾರರಾದ ಮಾತೆ ನೀಲಮ್ಮತಾಯಿರವರು ಮಾತನಾಡುತ್ತಾ, 12ನೇ ಶತಮಾನದ ಶರಣರು ತಮ್ಮ ಅನುಭಗಳನ್ನು ವಚನದ ಮುಖಾಂತರ ಜನರಿಗೆ ತಿಳಿಸಿದರು. ಶರಣರ ಅನುಭವಗಳನ್ನು ಒಂದು ತಿಂಗಳ ಪರ್ಯಂತ ಕೇಳುವುದರ ಮೂಲಕ ಮನಸ್ಸಿನ ಮೈಲಿಗೆಯನ್ನು ತೊಳೆದುಕೊಳ್ಳಬೇಕು. ಮನಸ್ಸಿಗೆ ಸುಖ, ಶಾಂತಿ ಸಿಗಬೇಕಾದರೆ ಒಳ್ಳೆಯದನ್ನು ಕೇಳಬೇಕು. ಕ್ಷಣಿಕ ಸುಖಕ್ಕಾಗಿ ನಮ್ಮತನವನ್ನು ಕಳೆದುಕೊಳ್ಳಬಾರದು. ನಮಗೆ ಈಗ ಮಾನಸಿಕ ಶಾಂತಿ ಬೇಕಾಗಿದೆ. ಆ ಶಾಂತಿ ಸಿಗಬೇಕಾದರೆ ಶರಣರ ವಚನಗಳನ್ನು ಆಲಿಸಬೇಕು. ಅಜ್ಞಾನ ಎಂಬ ನಿದ್ದೆಯಿಂದ ಏಳಬೇಕಾದರೆ ಶರಣರ ಅನುಭವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪುನೀತರಾಗಬೇಕು. ರಾಗ, ದ್ವೇಷ, ಅಸೂಯೆ ಬಿಟ್ಟರೆ ಮನಸ್ಸಿಗೆ ನೆಮ್ಮದಿ ಸಿಗುವದು ಎಂದರು. ಸಭೆಯ ಅಧ್ಯಕ್ಷತೆಯನ್ನು ಟ್ರಸ್ಟ್ ಕಮಿಟಿಯ ಹಿರಿಯ ಸದಸ್ಯ ಕೊಟ್ರಪ್ಪ ಕಮತರ ವಹಿಸಿದ್ದರು. ವೇದಿಕೆಯ ಮೇಲೆ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಟ್ರಸ್ಟ್ ಕಮಿಟಿಯ ಸದಸ್ಯರಾದ ಎಂ.ಎಂ. ಹಿರೇಮಠ, ಮುರಿಗೆಪ್ಪ ನಾಲ್ವಾಡ, ಚಂದ್ರಶೇಖರಪ್ಪ ಪಟ್ಟಣಶೆಟ್ಟಿ, ಶಿವಣ್ಣ ಕತ್ತಿ, ಸತ್ಸಂಗದ ಪ್ರಮುಖರಾದ ಸುನಂದಾ ಜೊಬಾಳೆ, ಪ್ರವಚನ ಸಮಿತಿ ಅಧ್ಯಕ್ಷರಾದ ಶೇಖಪ್ಪ ಹೊಂಬಳ ಇದ್ದರು. ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಮಿತಿಯ ಕಾರ್ಯದರ್ಶಿಗಳಾದ ಸಿದ್ದಣ್ಣ ಅರಳಿ, ಉಪಾಧ್ಯಕ್ಷರಾದ ಪಂಚಾಕ್ಷರಿ ಅಂಗಡಿ, ಪ್ರವೀಣ ನಂದಿಕೋಲಮಠ, ಬಸವರಾಜ ಮಡಿವಾಳರ, ಶ್ರೀಶೈಲಪ್ಪ ಪಟ್ಟಣಶೆಟ್ಟಿ, ಬಸವರಾಜ ಜಂತ್ಲಿ, ಬಸವರಾಜ ಮೊರಬದ, ವಿರೂಪಾಕ್ಷಪ್ಪ ಅಂಗಡಿ, ಗಂಗಾಧರ ನಂದಿಕೋಲಮಠ, ಪ್ರಕಾಶ ಜಂತ್ಲಿ, ಶಂಕರ ನಿರಲಕೇರಿ, ಸುರೇಶ ಮಾಳವಾಡ ಸೇರಿದಂತೆ ಸತ್ಸಂಗದ ಮಹಿಳಾ ಸದಸ್ಯರು ಭಾಗವಹಿಸಿದ್ದರು.

ಗದಗ ಜ್ಞಾನದ ಗದ್ದುಗೆಯಾಗಿದೆ. ಪ್ರವಚನ ಹೇಳುವವರು ಶ್ರೇಷ್ಠರು. ಅದನ್ನು ಮನಸ್ಸಿನಿಂದ ಕೇಳಿ ಜೀವನದಲ್ಲಿ ಅಳವಡಿಸಿಕೊಂಡವರು ಕೂಡಾ ಶ್ರೇಷ್ಠರು. ಸುಂದರವಾದ ವಚನಗಳನ್ನು ಕೇಳುವುದರಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಸಿಗುವದು. ಅತೀ ವೇಗವಾಗಿ ಓಡುವದು ಯಾವುದಾದರೂ ಇದ್ದರೆ ಅದು ನಮ್ಮ ಮನಸ್ಸು. ಒಳ್ಳೆಯದನ್ನು ವಿಚಾರ ಮಾಡಿದರೆ ಮನಸ್ಸಿಗೆ ನೆಮ್ಮದಿ ಸಿಗುವದು. ಕೆಟ್ಟ ವಿಚಾರಗಳನ್ನು ತಲೆಯಲ್ಲಿ ತುಂಬಿಕೊಂಡರೆ ಮನಸ್ಸಿಗೆ ನೆಮ್ಮದಿ ಸಿಗುವುದಿಲ್ಲ ಎಂದು ಷ.ಬ್ರ. ಶ್ರೀ ಪಕ್ಕೀರೇಶ್ವರ ಶಿವಚಾರ್ಯರು ನುಡಿದರು.

# ಪತ್ರಿಕಾ ರಂಗದ ಪಾತ್ರ ಪ್ರಮುಖವಾದದು




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಪತ್ರಿಕಾ ರಂಗದ ಪಾತ್ರ ಅತೀ ಮುಖ್ಯವಾದದ್ದು. ಪತ್ರಿಕಾ ರಂಗ ಸಂವಿಧಾನದ ಮೂಲಭೂತ ಹಕ್ಕುಗಳಲ್ಲಿ ಒಂದಾದ ವಾಕ್ ಸ್ವಾತಂತ್ರ್ಯದ ವಿಧಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ನರೇಗಲ್ಲ ಪತ್ರಕರ್ತ ಸಂಘದ ಅಧ್ಯಕ್ಷ ಆದರ್ಶ ಕುಲಕರ್ಣಿ ಹೇಳಿದರು.

ಸಮೀಪದ ಬೂದಿಹಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಹಮ್ಮಿಕೊಂಡ ಪತ್ರಿಕಾ ದಿನಾಚರಣೆ ಹಾಗೂ ಸ್ಮಾರ್ಟ್ ಕ್ಲಾಸ್ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡದ ಮೊದಲ ಪತ್ರಿಕೆಯನ್ನು ಹರ್ಮನ್ ಮೊಗ್ಲಿಂಗ್ ಆರಂಭಿಸಿದರು. ಮಂಗಳೂರು ಸಮಾಚಾರ ಕನ್ನಡದ ಮೊದಲ ಪ್ರತಿಕೆ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಪತ್ರಕರ್ತರ ಬರವಣಿಗೆ ಸತ್ಯವಾಗಿರುತ್ತವೆ. ಮುಕ್ತ ಮಾರುಕಟ್ಟೆ ಪ್ರವೇಶಕ್ಕೂ ಮೊದಲು ಬಹುತೇಕ ಪತ್ರಿಕೆಗಳು ಉತ್ತಮ ಕೆಲಸ ಮಾಡುತ್ತಿದ್ದವು. ಸರ್ಕಾರಗಳ ಹಗರಣಗಳನ್ನು ಬಯಲು ಮಾಡಿದ್ದವು.

ನನ್ನ ಎಲ್ಲ ಮಾಧ್ಯಮ ಮಿತ್ರರು ತಮ್ಮ ತಮ್ಮ ಜವಾಬ್ದಾರಿಯನ್ನು ನಿಭಾಯಿಸಿ ಸಾಮಾಜಿಕ ಸ್ವಾಸ್ಥ್ಯವನ್ನು ಎತ್ತಿ ಹಿಡಿಯಬೇಕು ಎಂದರು.

ಜಿಲ್ಲಾ ಕಾರ್ಯಕಾರಣಿ ಸದಸ್ಯ ಪ್ರಭುಸ್ವಾಮಿ ಅರವಟಗಿಮಠ ಮಾತನಾಡಿ, ಪತ್ರಕರ್ತರು ಪತ್ರಿಕಾ ಮೌಲ್ಯ, ಸಿದ್ಧಾಂತಗಳ ನಡುವೆ ಮಾನವೀಯ ಮೌಲ್ಯ ಬೆಳೆಸಿಕೊಳ್ಳಬೇಕು. ಸಮಾಜದ ಉತ್ತಮ ಸಾಧನೆ, ಸಮಸ್ಯೆ, ಕಾರ್ಯವೈಖರಿಗಳನ್ನು ಜನರಿಗೆ ತಿಳಿಸುವ ಕೆಲಸವನ್ನು ಪತ್ರಿಕೆಗಳು ವಸ್ತುನಿಷ್ಠವಾಗಿ ಮಾಡುತ್ತಿವೆ ಎಂದರು.

ಹಿರಿಯ ಪತ್ರಕರ್ತ ಅರುಣ ಕುಲಕರ್ಣಿ, ಪತ್ರಕರ್ತ ಚಂದ್ರು ರಾಠೋಡ, ಮುಖ್ಯ ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ ಮಾತನಾಡಿದರು. ಪತ್ರಕರ್ತರಾದ ಈಶ್ವರ ಬೆಟಗೇರಿ, ಮಲ್ಲಯ್ಯ ಗುಂಡಗೊಪುರಮಠ, ಸಂಗಮೇಶ ಮೆಣಸಗಿ, ಪ್ರಶಾಂತ ಜಕ್ಕಲಿ, ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪಗೌಡ್ರ, ಭರಮಗೌಡ್ರ, ಅಶೋಕ ಚಿಗರಿ, ಶಂಕ್ರಮ್ಮ ದೊಡ್ಡನಗೌಡ್ರ, ಶ್ರೀಕಾಂತ ಹಡಗಲಿ, ಜವಳಪ್ಪ ಚಿಕೆನಕೊಪ್ಪ, ಲಕ್ಷ್ಮೀ ಮಾದರ, ಪರಸಪ್ಪ ಕುರಿ, ಶಿಕ್ಷಕಿ ಕಾವ್ಯಾ ಇದ್ದರು. ತಾಲೂಕಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಕೆ. ಕೇಸರಿ ನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka